# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 68 | WEDNESDAY 20-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ‘ಅನಕ್ಷರಸ್ಥ’ ಪ್ರಧಾನಿಯಿಂದಾಗಿ ಪೆಟ್ರೋಲ್–ಡೀಸೆಲ್ ಮತ್ತು ಅನಿಲ ಬೆಲೆಗಳು ಹೆಚ್ಚಳವಾಗಿದೆ: ಸಿಎಂ ಸಿದ್ದರಾಮಯ್ಯ



ತುಮಕೂರು: ಮೋರ್ಬಿ ಘಟನೆಯ ನಂತರ 'ಗುಜರಾತ್ ಅಭಿವೃದ್ಧಿ ಮಾದರಿ' ಟೊಳ್ಳಾಗಿದೆ. ಆದರೆ ಕಲ್ಯಾಣ ಆಧಾರಿತ 'ಕರ್ನಾಟಕ ಮಾದರಿ' ಉತ್ತಮವಾಗಿದೆ ಎಂದು ಹೇಳುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ತರಾಟೆಗೆ ತೆಗೆದುಕೊಂಡಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಮೂರು ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ತುಮಕೂರಿನಲ್ಲಿ ನಡೆದ 'ಸ್ಟೀರಿಂಗ್ ಕರ್ನಾಟಕ ಅಭಿವೃದ್ಧಿಯತ್ತ' ಕಾರ್ಯಕ್ರಮದಲ್ಲಿ ಮಾತನಾಡಿದ ಸಿದ್ದರಾಮಯ್ಯ, ತಮ್ಮ ಸರ್ಕಾರವು ಅಭಿವೃದ್ಧಿ ಕಾರ್ಯಗಳು ಮತ್ತು ವ್ಯವಸ್ಥಿತ ಸುಧಾರಣೆಗಳನ್ನು ಕೈಗೊಳ್ಳುವುದರ ಜೊತೆಗೆ 1.40 ಲಕ್ಷ ಕೋಟಿ ರೂ.ಗಳಿಗೂ ಹೆಚ್ಚು ಮೌಲ್ಯದ ಕಲ್ಯಾಣ ಖಾತರಿಗಳನ್ನು ಜಾರಿಗೆ ತಂದಿದೆ ಎಂದರು.

ತುಮಕೂರು ಜಿಲ್ಲೆಯಲ್ಲಿ ರೂ.682 ಕೋಟಿಗೂ ಹೆಚ್ಚು ಮೌಲ್ಯದ ಅಭಿವೃದ್ಧಿ ಕಾರ್ಯಗಳಿಗೆ ಸಿದ್ದರಾಮಯ್ಯ ಉದ್ಘಾಟನೆ ಮತ್ತು ಅಡಿಪಾಯ ಹಾಕಿದರು. ಹಣದುಬ್ಬರ, ನಿರುದ್ಯೋಗ ಮತ್ತು ಆಪಾದಿತ ಕೋಮು ರಾಜಕೀಯದ ಬಗ್ಗೆ ಮುಖ್ಯಮಂತ್ರಿ ಬಿಜೆಪಿ ಮತ್ತು ಮೋದಿ ವಿರುದ್ಧ ದಾಳಿ ನಡೆಸಿದರು. 2,000 ರೂ. ಬಾಡಿಗೆ ಪಾವತಿಸಲು ವಿಫಲನಾದ ವ್ಯಕ್ತಿಯೊಬ್ಬ ಮನೆಯ ಮಾಲೀಕರು ಮತ್ತು ಆತನ ಸಹಾಯಕನಿಗೆ ತನ್ನ ಪತ್ನಿ ಮತ್ತು 13 ವರ್ಷದ ಮಗಳ ಮೇಲೆ ಪದೇ ಪದೇ ಅತ್ಯಾಚಾರ ಮಾಡಲು ಅವಕಾಶ ಮಾಡಿಕೊಟ್ಟಿದ್ದಾನೆ ಎಂದು ವರದಿಯಾಗಿತ್ತು. ಗುಜರಾತ್‌ನ ಮೋರ್ಬಿ ಜಿಲ್ಲೆಯಲ್ಲಿ ನಡೆದಿದ್ದ ಈ ಘಟನೆಯನ್ನು ಸಿದ್ದರಾಮಯ್ಯ ಉಲ್ಲೇಖಿಸಿದರು.

ಮೋದಿ 2001 ರಿಂದ 2014 ರವರೆಗೆ ಗುಜರಾತ್ ಮುಖ್ಯಮಂತ್ರಿಯಾಗಿದ್ದು 2014ರಿಂದ ಪ್ರಧಾನಿಯಾಗಿದ್ದಾರೆ. ಪ್ರಧಾನಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕಳೆದ 25 ವರ್ಷಗಳಿಂದ ಗುಜರಾತ್ ಅನ್ನು ಪ್ರತಿನಿಧಿಸಿದ್ದರು. ಗುಜರಾತ್‌ನಲ್ಲಿ ಸಾಮಾನ್ಯ ಜನರ ಜೀವನ ಯಾವ ಸ್ಥಿತಿಗೆ ತಲುಪಿದೆ ಎಂಬುದನ್ನು ನೀವು ತಿಳಿದುಕೊಳ್ಳಬೇಕು. ಈ ದೇಶದ ಆಡಳಿತವನ್ನು ನಾವು ಅನಕ್ಷರಸ್ಥ ಮತ್ತು ಕ್ರೂರ ಕೈಗಳಿಗೆ ಒಪ್ಪಿಸಿದ್ದೇವೆ ಎಂಬುದನ್ನು ಅರಿತುಕೊಳ್ಳುವುದು ನಡುಕವನ್ನುಂಟು ಮಾಡುತ್ತದೆ ಎಂದು ಮುಖ್ಯಮಂತ್ರಿ ಹೇಳಿದರು. ತಿಂಗಳಿಗೆ ರೂ. 2,000 ಬಾಡಿಗೆ ಪಾವತಿಸಲು ಸಾಧ್ಯವಾಗದ ರಾಜ್ಯದಲ್ಲಿ ಪ್ರತಿ ಚದರ ಮೀಟರ್‌ಗೆ ರೂ. 1 ರಿಂದ ರೂ. 32 ರ ದರದಲ್ಲಿ ಅದಾನಿ ಗ್ರೂಪ್ ಆಫ್ ಕಂಪನಿಗಳಿಗೆ 15,946 ಎಕರೆ ಭೂಮಿಯನ್ನು ನೀಡಲಾಗಿದೆ ಎಂದು ಆರೋಪಿಸಲಾಗಿದೆ.

2019ರಿಂದ 2023ರವರೆಗೆ ಕರ್ನಾಟಕವನ್ನು ಆಳಿದ ಬಿಜೆಪಿ ಸರ್ಕಾರವನ್ನು ಗುರಿಯಾಗಿಸಿಕೊಂಡ ಸಿದ್ದರಾಮಯ್ಯ, ಬಿಜೆಪಿಯೂ ದ್ವೇಷವನ್ನು ಹರಡುತ್ತಿದೆ ಮತ್ತು ಆರ್ಥಿಕತೆಯನ್ನು ದುರ್ಬಲಗೊಳಿಸುತ್ತಿದೆ ಎಂದು ಆರೋಪಿಸಿದರು. ಇಂಧನ ಮತ್ತು ಅಡುಗೆ ಅನಿಲ ಬೆಲೆಗಳನ್ನು ಟೀಕಿಸಿದ ಸಿದ್ದರಾಮಯ್ಯ, ಇತ್ತೀಚಿನ ತಿಂಗಳುಗಳಲ್ಲಿ ವಾಣಿಜ್ಯ ಎಲ್‌ಪಿಜಿ ಬೆಲೆಗಳು ತೀವ್ರವಾಗಿ ಏರಿವೆ. ಕೇಂದ್ರದ ನೀತಿಗಳು ಹಣದುಬ್ಬರವನ್ನು ಇನ್ನಷ್ಟು ಹದಗೆಡಿಸಿವೆ ಎಂದು ಆರೋಪಿಸಿದರು. ಮೋದಿಯಿಂದಾಗಿ, ಪೆಟ್ರೋಲ್–ಡೀಸೆಲ್ ಮತ್ತು ಅನಿಲ ಬೆಲೆಗಳು ಆಕಾಶವನ್ನು ಮುಟ್ಟಿವೆ ಎಂದು ಆರೋಪಿಸಿದರು. 2023ರ ವಿಧಾನಸಭಾ ಚುನಾವಣೆಗೆ ಮುನ್ನ ಕಾಂಗ್ರೆಸ್ ಸರ್ಕಾರ ನೀಡಿದ್ದ ಭರವಸೆಗಳನ್ನು ಈಡೇರಿಸಿದೆ ಎಂದರು. ಕಾಂಗ್ರೆಸ್ ಸರ್ಕಾರದ ಕಲ್ಯಾಣ ಕಾರ್ಯ ಕ್ರಮಗಳನ್ನು ಸಮರ್ಥಿಸಿಕೊಂಡ ಸಿದ್ದರಾ ಮಯ್ಯ, 2023ರಿಂದ ರಾಜ್ಯವು ಐದು ಖಾತರಿ ಯೋಜನೆಗಳಿಗೆ 1,40,233 ಕೋಟಿ ರೂ.ಗಳನ್ನು ಖರ್ಚು ಮಾಡಿದೆ ಎಂದು ಹೇಳಿದರು. ಇದರಲ್ಲಿ ಗೃಹಲಕ್ಷ್ಮಿಗೆ 75,164 ಕೋಟಿ ನೀಡಲಾಗಿದೆ ಎಂದರು. ಗೃಹ ಜ್ಯೋತಿಗೆ 30,080 ಕೋಟಿ ರೂ.ಗಳು, ಅನ್ನ ಭಾಗ್ಯಕ್ಕೆ 19,974 ಕೋಟಿ ರೂ.ಗಳು, ಶಕ್ತಿಗೆ 14,015 ಕೋಟಿ ರೂ.ಗಳು ಮತ್ತು ಯುವ ನಿಧಿಗೆ 1,001 ಕೋಟಿ ರೂ.ಗಳು ಸೇರಿವೆ. ಈ ಯೋಜನೆಗಳಲ್ಲಿ ಯಾವುದೇ ಭ್ರಷ್ಟಾಚಾರವಿಲ್ಲ, ಮಧ್ಯವರ್ತಿಗಳಿಲ್ಲ, ನಾವು ನೇರವಾಗಿ ಜನರಿಗೆ ತಲುಪಿಸುತ್ತಿದ್ದೇವೆ ಎಂದರು.

## ಸರ್ಕಾರದ ಸಮಾರಾಧನೆ ಸಮಾವೇಶ



ಬೆಂಗಳೂರು: ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳಾಗುತ್ತಾ ಬಂದರೂ ಯಾವುದೇ ಅಭಿವೃದ್ಧಿ ಕೆಲಸ ಮಾಡಿಲ್ಲ.

ತುಮಕೂರಿನಲ್ಲಿ ಇಂದು ನಡೆಯುತ್ತಿರುವುದು ಸರ್ಕಾರದ ಸಾಧನಾ ಸಮಾವೇಶ ಅಲ್ಲ, ಅದು ಸತ್ತ ಸರ್ಕಾರದ ಸಮಾರಾಧನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತೀವ್ರವಾಗಿ ಆಕ್ರೋಶ ಹೊರಹಾಕಿದ್ದಾರೆ.

ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಬಿಜೆಪಿ ರಾಜ್ಯ ಕಚೇರಿಯಲ್ಲಿ ಇಂದು ತುಮಕೂರು ಸಾಧನಾ ಸಮಾವೇಶದ ಹಿನ್ನೆಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ತುರ್ತು ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಸರ್ಕಾರದ ಜಾಹೀರಾತುಗಳ ಭಾಷೆಯನ್ನು ಉಲ್ಲೇಖಿಸಿ ಲೇವಡಿ ಮಾಡಿದ ವಿಜಯೇಂದ್ರ, “ಗ್ಯಾರಂಟಿ ಹಬ್ಬ ನಾಲ್ಕನೇ ವರ್ಷಕ್ಕೆ ಪಾದಾರ್ಪಣೆ, ಸಮರ್ಪಣೆ, ಸಂಕಲ್ಪ, ಮತ್ತಷ್ಟು ಜನಪರ ಸೇವೆಯ ಪ್ರತಿಜ್ಞೆ ಎಂದು ಪತ್ರಿಕೆಗಳಿಗೆ ದೊಡ್ಡ ದೊಡ್ಡ ಜಾಹೀರಾತು ನೀಡಿದ್ದಾರೆ. ನಾನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೇರವಾಗಿ ಪ್ರಶ್ನೆ ಮಾಡುತ್ತೇನೆ, ಯಾವ ಪುರುಷಾರ್ಥಕ್ಕೆ ಈ ಸಾಧನಾ ಸಮಾವೇಶ ಮಾಡುತ್ತಿದ್ದೀರಿ? ಕಳೆದ ಮೂರು ವರ್ಷಗಳಲ್ಲಿ ತಾವು ಮಾಡಿದ ಸಾಧನೆಯಾದರೂ ಏನು ರಾಜ್ಯದಲ್ಲಿ ಏನಾದರೂ ಹೊಸ ಯೋಜನೆಗಳನ್ನು ತಂದಿದ್ದೀರಾ?” ಎಂದು ಪ್ರಶ್ನಿಸಿದರು.

“ಅತಿ ಹೆಚ್ಚು ಬಾರಿ ಬಜೆಟ್ ಮಂಡಿಸಿದ, ಸುದೀರ್ಘ ಕಾಲ ಮುಖ್ಯಮಂತ್ರಿಯಾದ ಹೆಗ್ಗಳಿಕೆ ಸಿದ್ದರಾಮಯ್ಯ ಅವರದ್ದು. ಆದರೆ, ಅಹಿಂದ ವರ್ಗವನ್ನು ಕೇವಲ ದುರ್ಬಳಕೆ ಮಾಡಿಕೊಂಡು ಅಧಿಕಾರ ಅನುಭವಿಸುತ್ತಿದ್ದಾರೆ. ಸಿದ್ದರಾಮಯ್ಯ ಅವರ ಆಡಳಿತದ ಪರಿಸ್ಥಿತಿ ನೋಡಿದರೆ, ಅವರು 'ಮನೆಗೆ ಮಗನೂ ಆಗಲಿಲ್ಲ, ಊರಿಗೆ ಉಪಕಾರಿಯೂ ಆಗಲಿಲ್ಲ' ಎನ್ನುವಂತಾಗಿದೆ. ಇಡೀ ರಾಜ್ಯವನ್ನು ಸಾಲದ ಶೂಲಕ್ಕೆ ನೂಕಿ ಅರಾಜಕತೆ ಸೃಷ್ಟಿಸಿದ್ದಾರೆ. ಎಂದು ಬಿ.ವೈ. ವಿಜಯೇಂದ್ರ ದೂರಿದರು.

## ಡಿಸಿಸಿ ಬ್ಯಾಂಕ್ ನೂತನ ಶಾಖೆ ಉದ್ಘಾಟನೆ



ಚನ್ನಮ್ಮನ ಕಿತ್ತೂರು: ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ ಇದರ ಉಪ ಶಾಖೆ ತಾಲೂಕಿನ ಅಂಬಡಗಟ್ಟಿ ಗ್ರಾಮದಲ್ಲಿ ಉದ್ಘಾಟನೆಗೊಂಡಿತು. ಡಿಸಿಸಿ ಬ್ಯಾಂಕ್ ನಿರ್ದೇಶಕ ನಾನಾಸಾಹೇಬ ಪಾಟೀಲ ಉದ್ಘಾಟಿಸಿದರು. ಸಭೆಯ ಅಧ್ಯಕ್ಷತೆ ಶಾಸಕ ಬಾಬಾಸಾಹೇಬ ಪಾಟೀಲ ವಹಿಸಿಕೊಂಡು ಮಾತನಾಡಿದರು.

ಅರವಳ್ಳಿಯ ಚನ್ನಬಸವದೇವರು ಸಾನಿಧ್ಯ ವಹಿಸಿ ದೀಪ ಬೆಳಗಿಸಿದರು. ಸಭೆಯಲ್ಲಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ ಮುಖ್ಯ ಕಾರ್ಯನಿರ್ವಾಣಾ (ಪ್ರಭಾರ) ಅಧಿಕಾರಿ ನಿಸ್ಸಾರ್ ಅಹಮ್ಮದ್ ಕಲಾವಂತ, ಅಂಬಡಗಟ್ಟಿ ಪಿಕೆಪಿಎಸ್ ಅಧ್ಯಕ್ಷ ಮಹಾಂತೇಶ ಎಸ್ ದಾಸ್ತಿಕೊಪ್ಪ, ಶಿವಪುತ್ರ ಬಾಗೇವಾಡಿ, ದೇವುಗೌಡ ಪಾಟೀಲ, ತಾಲೂಕ ನಿಯಂತ್ರಣಾಧಿಕಾರಿ ಶಿವಾನಂದ ಕೊಟಗಿ, ತಹಜಾನ್ ಹವಾಲ್ದಾರ, ಡಿಸಿಸಿ ಬ್ಯಾಂಕ ಹಾಗೂ ಪಿಕೆಪಿಎಸ್ ಸಿಬ್ಬಂದಿ, ಸಾರ್ವಜನಿಕರು, ಮುಖಂಡರು ಇತರರಿದ್ದರು.

## ಬೆಳಗಾವಿ ಬೆಳಕು ಸಮಾರಂಭದಲ್ಲಿ ಅಥಣಿಯ ವಿದ್ಯಾರ್ಥಿ ಪ್ರಜ್ವಲಗೆ ಸನ್ಮಾನ



ಅಥಣಿ: ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ಬೆಳಗಾವಿ ವತಿಯಿಂದ ಸುವರ್ಣ ಸೌಧದಲ್ಲಿ ರವಿವಾರ ಹಮ್ಮಿಕೊಂಡಿದ್ದ "ಬೆಳಗಾವಿ ಬೆಳಕು" ಅಭಿನಂದನಾ ಸಮಾರಂಭದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆಗೈದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಅಥಣಿ ತಾಲೂಕಿನ ಶಾರದಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸಪ್ತಸಾಗರ ಪ್ರೌಢಶಾಲೆಯ ವಿದ್ಯಾರ್ಥಿ ಪ್ರಜ್ವಲ ಬಮ್ಮಣ್ಣವರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625 ಕ್ಕೆ 618 ಅಂಕಗಳು 98.88% ಪಡೆದು ಅಥಣಿ ತಾಲೂಕಿಗೆ ತೃತೀಯ ಸ್ಥಾನ ಹಾಗೂ ಶೇಗುಣಸಿ ಪರೀಕ್ಷಾ ಕೇಂದ್ರಕ್ಕೆ ಪ್ರಥಮ ಸ್ಥಾನ ಗಳಿಸಿದ ನಿಮಿತ್ಯವಾಗಿ ಸನ್ಮಾನಕ್ಕೆ ಪಾತ್ರರಾದರು.

ಸಮಾರಂಭದಲ್ಲಿ ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಚಿಕ್ಕೋಡಿ ಡಿಡಿಪಿಐ ಸೀತಾರಾಮು ಆರ್. ಎಸ್.

ಜಿಲ್ಲಾ ಪಂಚಾಯತ್ ಸಿಇಒ ರಾಹುಲ್ ಶಿಂಧೆ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್ ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ಭಾಗಿಯಾಗಿದ್ದರು

ಸನ್ಮಾನಿತ ವಿದ್ಯಾರ್ಥಿ ಪ್ರಜ್ವಲಗೆ ಸಂಸ್ಥೆಯ ಸಂಸ್ಥಾಪಕ ಡಿ.ಬಿ.ನದಾಫ್, ಆಡಳಿತ ಮಂಡಳಿ, ಶಿಕ್ಷಕ ವೃಂದ, ಪಾಲಕರು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

## ವಿದ್ಯಾರ್ಥಿಗಳು ಸಂಸ್ಕಾರ, ಸಂಸ್ಕೃತಿ, ಆದರ್ಶ ಬೆಳೆಸಿಕೊಳ್ಳಿ

ಅಥಣಿ: ಪ್ರತಿಯೊಬ್ಬರಲ್ಲಿ ಪ್ರತಿಭೆ ಇದ್ದೇ ಇರುತ್ತದೆ, ವಿದ್ಯಾರ್ಥಿಗಳಲ್ಲಿರುವ ಸೂಕ್ತ ಪ್ರತಿಭೆಯನ್ನು ಗುರುತಿಸಿ ಸೂಕ್ತ ಮಾರ್ಗದರ್ಶನ ನೀಡಿ ಪ್ರೋತ್ಸಾಹಿಸಿದಾಗ ಅವರು ಸಾಧಕರಾಗಿ ಬೆಳೆಯಲು ಸಾಧ್ಯ ಎಂದು ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಡಾ. ಬಾಳಾಸಾಹೇಬ ಲೋಕಾಪುರ ಹೇಳಿದರು.

ಅವರು ರವಿವಾರ ಇಲ್ಲಿನ ಕೆಎಲ್‌ಇ ಸಂಸ್ಥೆಯ ಎಸ್ ಎಸ್ ಎಂಎಸ್ ಮಹಾವಿದ್ಯಾಲಯದ ಖೋತ ಸಭಾಂಗಣದಲ್ಲಿ ಲಯನ್ಸ್ ಕ್ಲಬ್ ಆಫ್ ಅಥಣಿ ಹಮ್ಮಿಕೊಂಡಿದ್ದ ಸಾಧಕ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಅಥಣಿ ಲಯನ್ಸ್ ಕ್ಲಬ್ ಅನೇಕ ಸಾಮಾಜಿಕ ಸೇವೆ ಮಾಡುತ್ತ ಜನರ ಪ್ರಶಂಸೆಗೆ ಪಾತ್ರವಾಗಿದೆ. ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ನೀಡಿ ಪ್ರೋತ್ಸಾಹಿಸುತ್ತಿರುವ ಕಾರ್ಯ ಶ್ಲಾಘನೀಯ ಎಂದರು.

ಪ್ರತಿಯೊಬ್ಬ ವಿದ್ಯಾರ್ಥಿ ಜೀವನದಲ್ಲಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪ್ರಮುಖ ಹಂತಗಳು. ಶಿಕ್ಷಣ ಪ್ರತಿಯೊಬ್ಬರಿಗೂ ಬೇಕು, ಆದರೆ ಇತ್ತೀಚಿನ ದಿನಗಳಲ್ಲಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸುವುದೊಂದೇ ಮುಖ್ಯವಾಗುತ್ತಿದೆ. ಹೆಚ್ಚು ಅಂಕಗಳು ಬಂದ ಅನೇಕ ವಿದ್ಯಾರ್ಥಿಗಳು ತಮ್ಮ ಬದುಕಿನಲ್ಲಿ ಫೇಲಾಗಿರುವುದನ್ನು ಕಂಡಿದ್ದೇವೆ. ಎಷ್ಟು ಮಕ್ಕಳು ಹೆಚ್ಚು ಅಂಕಗಳು ಬರಲಿಲ್ಲ ಎಂದು ಮಾನಸಿಕವಾಗಿ ಕುಗ್ಗಿ, ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆದ್ದರಿಂದ ಹೆಚ್ಚು ಅಂಕ ಗಳಿಸುವುದು ಒಂದೇ ಮಾನದಂಡ ವಲ್ಲ. ವಿದ್ಯಾರ್ಥಿಗಳ ಜೀವನದಲ್ಲಿ ಅವರವರ ಸಾಮರ್ಥ್ಯಕ್ಕೆ ತಕ್ಕಂತೆ ಜ್ಞಾನವನ್ನು ಸಂಗ್ರಹಿಸುವುದರ ಜೊತೆಗೆ ಜೀವನದಲ್ಲಿ ಸಂಸ್ಕಾರ, ಸಂಸ್ಕೃತಿ, ಆದರ್ಶ ಗುಣಗಳನ್ನು ಅಳವಡಿಸಿ ಕೊಳ್ಳಬೇಕು. ನಮ್ಮ ಬದುಕಿನ ಆದರ್ಶಗಳನ್ನ ಅರಿತುಕೊಳ್ಳಬೇಕು

ಸಣ್ಣಪುಟ್ಟ ಸಂತಸಗಳನ್ನ ವಿದ್ಯಾರ್ಥಿಗಳು ಸಂಭ್ರಮಿಸಬೇಕು, ಈ ಸಂಭ್ರಮವೇ ನಮಗೆ ಇನ್ನಷ್ಟು ಸಾಧನೆಗೆ ಸ್ಫೂರ್ತಿ ನೀಡಬಲ್ಲದು. ಕೇವಲ ದೈವ ಶಕ್ತಿಗಳನ್ನ ನಂಬಿದೆ ಜೀವನದ ಧ್ಯೆಯ(ಗುರಿ ) ಅರಿತುಕೊಳ್ಳಬೇಕು. ದೈವಿಕ ಶಕ್ತಿಯ

ಉನ್ನತ ಹುದ್ದೆಗಳಿಗೆ ಹೋದ ನಂತರ ಹೆತ್ತವರಿಗೆ ಉತ್ತಮ ಮಕ್ಕಳಾಗಿ, ಕಲಿಸಿದ ಗುರುಗಳಿಗೆ ಆದರ್ಶ ಶಿಷ್ಯರಾಗಿ, ಪ್ರೋತ್ಸಾಹ ನೀಡಿದ ಸಮಾಜಕ್ಕೆ ಋಣಿಯಾಗಿ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.




ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಲಯನ್ಸ್ ಕ್ಲಬ್ ನ ಅಧ್ಯಕ್ಷ ರಮೇಶ ಬುಲಬುಲೆ ಮಾತನಾಡಿ ಈ ಬಾರಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳು ರಾಜ್ಯಕ್ಕೆ ಟಾಪರ್ ಆಗಿ ಅಥಣಿ ತಾಲೂಕಿನ ಕೀರ್ತಿಯನ್ನು ಹೆಚ್ಚಿಸಿದ್ದು ನಮ್ಮೆಲ್ಲರಿಗೆ ಹೆಮ್ಮೆ. ಈ ಎಲ್ಲಾ ಸಾಧಕ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಇನ್ನಷ್ಟು ಉನ್ನತ ಶಿಕ್ಷಣವನ್ನ ಪಡೆದುಕೊಂಡು ಉನ್ನತ ಹುದ್ದೆಗಳನ್ನು ಪಡೆದು ದೇಶದ ಮತ್ತು ನಾಡಿನ ಅಭಿವೃದ್ಧಿಗೆ ಶ್ರಮಿಸುವ ಮೂಲಕ ಇನ್ನಿತರರಿಗೆ ಮಾದರಿ ಯಾಗಬೇಕು ಎಂದು ಸಾಧಕ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕಟಗೇರಿ ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಕು. ಪ್ರಾರ್ಥನಾ ಬಿರಾದಾರ ಪಾಟೀಲ, ಹಾಗೂ ಐಗಳಿ ಆದರ್ಶ ಪ್ರೌಢಶಾಲೆಯ ವಿದ್ಯಾರ್ಥಿ ದಶರಥ ಶಿವಾಜಿ ಬೋಸಲೆ ಪಾಲಕರನ್ನು ಸೇರಿದಂತೆ ನೂರಾರು ಸಾಧಕ ವಿದ್ಯಾರ್ಥಿಗಳಿಗೆ ಲಯನ್ಸ್ ಕ್ಲಬ್ ವತಿಯಿಂದ ಸನ್ಮಾನಿಸಲಾಯಿತು.

ಈ ವೇಳೆ ಲಯನ್ಸ್ ಕ್ಲಬ್ ಉಪಾಧ್ಯಕ್ಷ ಆನಂದ ಟೋಣಪಿ, ಕಾರ್ಯದರ್ಶಿ ವಿನೋದ್ ಕನಮಡಿ, ಖಜಾಂಚಿ ಅಶೋಕ ಹೊಸೂರ, ಕಿರಣ ಸಿರಗುಪ್ಪಿ, ಬಸವರಾಜ ಬಾವಣ್ಣವರ, ಬಾಹುಸಾಹೇಬ ನಾಯಿಕ, ವೈಭವ ಪೋತದಾರ, ಡಾ. ರವಿ ಗಾವಡೆ, ಭಾರತಿ ಕೋರೆ, ಇರಾವತಿ ಕವಲಾಪುರೆ, ಭಾರತಿ ಸಂಕ್ರಟ್ಟಿ, ಮೋಹನ ಕಾಂಬಳೆ, ಮಂಜುನಾಥ ಬಡಿಗೇರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಹಣಕಾಸಿನ ಶಿಕ್ಷಣ ಮತ್ತು ಯೋಜನೆ ಕಾರ್ಯಾಗಾರ

ನವಲಗುಂದ: ಹಣದ ಹೂಡಿಕೆ ಮತ್ತು ವೃದ್ಧಿಯನ್ನು ಜಾಣ್ಮೆಯಿಂದ ಮಾಡಬೇಕು ಹಾಗೂ ಸುರಕ್ಷಿತ ವ್ಯವಹಾರಗಳು ದೇಶದ ಆರ್ಥಿಕತೆಗೆ ತಳಹದಿಯಾಗಿರುತ್ತವೆ ಎಂದು ಭಾರತೀಯ ಶೇರು ವಿನಮಯ ಕೇಂದ್ರದ ತರಬೇತುದಾರರಾದ ನಂದನ್ ಗುಳಾಲದ ಹೇಳಿದರು.

ಅವರು ಸ್ಥಳೀಯ ಶಂಕರ ಮಹಾವಿದ್ಯಾಲಯದಲ್ಲಿ ಆಂತರಿಕ ಗುಣಮಟ್ಟದ ಭರವಸೆಯ ಕೋಶದ ಅಡಿಯಲ್ಲಿ ವಾಣಿಜ್ಯ ವಿಭಾಗ ಹಾಗೂ ನ್ಯಾಷನಲ್ ಸೆಂಟರ್ ಫಾರ್ ಫೈನಾನ್ಸಿಯಲ್ ಎಜುಕೇಶನ್ ಇವರ ಸಹಯೋಗದಲ್ಲಿ ಕೇಂದ್ರ ಸರ್ಕಾರ




ಪ್ರಾಯೋಜಿತ " ಹಣಕಾಸಿನ ಶಿಕ್ಷಣ ಮತ್ತು ಯೋಜನೆ" ಎಂಬ ವಿಷಯದ ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿದರು.

ಮಹಾವಿದ್ಯಾಲಯದ ಭರವಸೆಯ ಕೋಶದ ಸಂಯೋಜಕರಾದ ಪಿ ಜಿ ಕೊಪ್ಪದ ಮಾತನಾಡಿ ಆದಾಯದ ಮೂಲಗಳು ಮತ್ತು ವೆಚ್ಚಗಳ ಯೋಜನೆ, ಹೂಡಿಕೆ, ಸಾಲದ ನಿರ್ವಹಣೆ ಹಾಗೂ ತೆರಿಗೆ ಬಗ್ಗೆ ಹೆಚ್ಚಿನ ಜ್ಞಾನ ಹೊಂದಲು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ವಿದ್ಯಾರ್ಥಿ ಯಶೋಧಾ ಹಡಪದ ವಂದನಾರ್ಪಣೆ, ದೇವರಾಜ್ ಬೆಳ್ಳಿಗಟ್ಟಿ ನಿರೂಪಣೆ, ಶ್ವೇತಾ ಹೆಬಸೂರು ಸ್ವಾಗತ, ಬಿ.ಕೆ ಬಂಕಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರಾಧ್ಯಾಪಕರಾದ ಆರ್ ಪಿ ಚವ್ಹಾಣ, ಅಕ್ಕಮ್ಮ ಯಮನೂರು, ವಿಜಯಲಕ್ಷ್ಮಿ ಸಾವಂತ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

***************

# 24 ರಂದು ಪ್ರತಿಭಾ ಪುರಸ್ಕಾರ : ಪ್ರತಿಭಾ ಪುರಸ್ಕಾರ ವಿದ್ಯಾರ್ಥಿಗಳಿಗೆ ಪ್ರೇರಣೆ : ಶಾಸಕ ಲಕ್ಷ್ಮಣ ಸವದಿ



ಅಥಣಿ: ತಾಲೂಕಿನ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಇದೇ ಮೇ 24ರಂದು ಕೃಷ್ಣಾ ಸಕ್ಕರೆ ಕಾರ್ಖಾನೆಯ ರೈತ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ಸಾಧಕ ವಿದ್ಯಾರ್ಥಿಗಳು, ಪಾಲಕರು ಮತ್ತು ಶಿಕ್ಷಕರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮೂಲಕ ಯಶಸ್ವಿಗೊಳಿಸಬೇಕು ಎಂದು ಮಾಜಿ ಉಪ ಮುಖ್ಯಮಂತ್ರಿಗಳು ಹಾಗೂ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಪಟ್ಟಣದ ಹೊರವಲಯದಲ್ಲಿರುವ ಸೋಶಿಯಲ್ ಕ್ಲಬ್‌ನಲ್ಲಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತಿದ್ದರು ಅಥಣಿ ಮತಕ್ಷೇತ್ರದಲ್ಲಿ ಈ ಬಾರಿ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ. ಪರೀಕ್ಷೆಯಲ್ಲಿ ಹಲವಾರು ವಿದ್ಯಾರ್ಥಿಗಳು ರಾಜ್ಯಮಟ್ಟದಲ್ಲಿ ಹೆಸರು ಪಡೆದು ಉತ್ತಮ ಫಲಿತಾಂಶ ಗಳಿಸಿದ್ದಾರೆ. ಇಂತಹ ಎಲ್ಲ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರದಿಂದ ಬೇರೆ ವಿದ್ಯಾರ್ಥಿಗಳಿಗೆ ಇದು ಸ್ಫೂರ್ತಿಯಾಗಲಿದೆ. ವರ್ಷದಿಂದ ವರ್ಷಕ್ಕೆ ಫಲಿತಾಂಶ ಹೆಚ್ಚಳವಾಗಲಿದೆ. ಈ ಕಾರ್ಯಕ್ರಮದಲ್ಲಿ ಅಥಣಿ ತಾಲೂಕಿನಲ್ಲಿ ಶೇ.85ಕ್ಕಿಂತ ಅಧಿಕ ಅಂಕಗಳನ್ನು ಪಡೆದ ಒಟ್ಟು 2200 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಸಾಧಕ ವಿದ್ಯಾರ್ಥಿಗಳು, ಪಾಲಕರು ಮತ್ತು ಶಿಕ್ಷಕರು ಸೇರಿದಂತೆ ಒಟ್ಟು 5000ಕ್ಕೂ ಅಧಿಕ ಜನ ಸೇರುವ ನಿರೀಕ್ಷೆ ಇದೆ. ಈ ಕಾರ್ಯಕ್ರಮ ಯಶಸ್ವಿಯಾಗಲು ಕಾರ್ಯಕರ್ತರು ಶ್ರಮಿಸಬೇಕೆಂದು ಹೇಳಿದರು.

ತಾಲೂಕಿನ ಕಟಗೇರಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಪ್ರಾರ್ಥನಾ ಬಿರಾದಾರಪಾಟೀಲ. ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದು ತಾಲೂಕಿಗೆ ಕೀರ್ತಿ ತಂದಿದ್ದಾಳೆ. ಹಾಗೆಯೇ ಐಗಳಿ ಗ್ರಾಮದ ಆದರ್ಶ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿ ಭೋಸಲೆ ದ್ವಿತೀಯ ಸ್ಥಾನ ಪಡೆದು ಕೀರ್ತಿ ಹೆಚ್ಚಿಸಿದ್ದಾರೆ. ಸವದಿ ಗ್ರಾಮದ ರೈತನ ಮಗ ಬಸವರಾಜ ಕೆಂಪವಾಡ ಐಎಎಸ್ ಪರೀಕ್ಷೆಯಲ್ಲಿ ರಾಷ್ಟ್ರಮಟ್ಟಕ್ಕೆ ಪ್ರಥಮ ಸ್ಥಾನ ಪಡೆದು ನಾಡಿಗೆ ಕೀರ್ತಿ ತಂದಿದ್ದಾನೆ. ಇಂತಹ ಸಾಧಕರನ್ನು ಗೌರವಿಸುವುದರ ಜೊತೆಗೆ ಸಾವಿರಾರು ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ವಿದ್ಯಾರ್ಥಿಗಳಿಗೆ ಬ್ಯಾಗ್, ವಾಟರ್ ಬಾಟಲ್, ಶಾಲು ನೀಡಿ ಗೌರವಿಸುವ ಜೊತೆಗೆ ಪೂಜ್ಯರಿಂದ ಪುಷ್ಪ ವೃಷ್ಟಿ ಮಾಡಿ ಅಭಿನಂದಿಸಲಾಗುತ್ತದೆ. ವಿದ್ಯಾರ್ಥಿಗಳ ಭವಿಷ್ಯ ಉಜ್ವಲಗೊಳ್ಳುವಂತಾಗಲು ಹಾಗೂ ಅವರಿಗೆ ಉತ್ತಮ ರೀತಿಯಲ್ಲಿ ಮಾರ್ಗದರ್ಶನ ನೀಡಲು ಅನುಭವಿ ಉಪನ್ಯಾಸಕರನ್ನು ಕರೆಯಿಸಿ ಅವರಿಂದ ಮಕ್ಕಳಿಗೆ ಉಪನ್ಯಾಸ ನೀಡಲಾಗುವುದು. ಎಂದರು.

ಈ ಕಾರ್ಯಕ್ರಮದ ಯಶಸ್ಸಿಗೆ ಶಿಕ್ಷಣ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಹಾಗೂ ಮುಖಂಡರು, ಕಾರ್ಯಕರ್ತರು, ಶಿಕ್ಷಣ ಪ್ರೇಮಿಗಳು ಸಹಕಾರ ನೀಡಬೇಕು ಮನವಿ ಮಾಡಿದರು.

ಈ ವೇಳೆ ಯುವ ಮುಖಂಡ ಚಿದಾನಂದ ಸವದಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಮ್. ಆರ್. ಮುಂಜೆ, ಕೆಎಂಎಫ್ ನಿರ್ದೇಶಕ ಮಹಾದೇವ ಬಿಳಿಕುರಿ, ಪುರಸಭೆ ಸದಸ್ಯರಾದ ರಾವಸಾಬ ಐಹೊಳೆ, ಮಲ್ಲಿಕಾರ್ಜುನ ಬುಟಾಳಿ, ರಾಜು ಗುಡೋಡಗಿ, ಕಲ್ಲೇಶ ಮಡ್ಡಿ, ಸಯ್ಯದ ಅಮೀನ ಗದ್ಯಾಳ, ಬಸವರಾಜ ನಾಯಿಕ, ಪ್ರಮೋದ ಬಿಳ್ಳೂರ. ಮಲ್ಲೇಶ್ ಹುದ್ದಾರ. ನಾಮನಿರ್ದೇಶನ ಸದಸ್ಯರಾದ ಮುಸ್ತಾಕ್ ಮುಲ್ಲಾ. ಶಶಿಕಾಂತ ಹುಲಕುಂದ, ಮುಖಂಡರಾದ ದಿಲೀಪ ಲೋಣಾರಿ, ಆಸೀಫ ತಾಂಬೋಳಿ. ರವಿ ಭಡಕಂಬಿ. ಮಲ್ಲೇಶ ಸವದಿ. ಬೀರಪ್ಪ ಯಕಂಚ್ಚಿ. ಮಲ್ಲು ಕುಲ್ಲೋಳಿ. ನ್ಯಾಯವಾದಿಗಳಾದ ಎ ಎಮ್ ಖೊಬ್ರಿ. ಡಿ ಬಿ ಠಕ್ಕಣ್ಣವರ. ಶಿವಾನಂದ ಸವದಿ. ಸುಶೀಲಕುಮಾರ ಪತ್ತಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹಿಂದೂಗಳು ಒಂದಾಗಿ ಮತ ಹಾಕಿದ್ದಕ್ಕೆ ವಿಜಯಪುರ ನಗರದ ಅಭಿವೃದ್ಧಿ; ಶಾಸಕ ಯತ್ನಾಳ



ವಿಜಯಪುರ: ಹಿಂದೂಗಳು ಒಗ್ಗಟ್ಟಾಗಿ ಹೆಚ್ಚಿನ ಪ್ರಮಾಣದಲ್ಲಿ ಮತದಾನ ಮಾಡಿದ್ದರಿಂದಲೇ ನಾನು ಎರಡು ಬಾರಿ ಶಾಸಕನಾಗಿ ಆಯ್ಕೆಯಾಗಿ ನಿರೀಕ್ಷೆ ಮೀರಿ ವಿಜಯಪುರ ನಗರವನ್ನು ಅಭಿವೃದ್ಧಿ ಮಾಡಲು ಸಾಧ್ಯವಾಗಿದೆ. ಹೀಗಾಗಿ ಮುಂಬರುವ ಚುನಾವಣೆ ದೃಷ್ಟಿಯಿಂದ ಪ್ರತಿಯೊಬ್ಬರ ಮನೆಯಲ್ಲಿಯೂ 18 ವರ್ಷ ಮೇಲ್ಪಟ್ಟವರನ್ನು ತಪ್ಪದೆ ಮತದಾರರ ಪಟ್ಟಿಯಲ್ಲಿ ಸೇರಿಸಬೇಕು ಎಂದು ಹೇಳಿದರು.

ವಿಜಯಪುರ ನಗರದ ವಾರ್ಡ್ ನಂ.22 ರ ವಿವೇಕ ನಗರ ಪೂರ್ವ ಭಾಗದ ಈಶ್ವರ ಗುಡಿ ಹತ್ತಿರ ಕನಕದಾಸ ಬಡಾವಣೆ/ವಿವೇಕ ನಗರ ಪೂರ್ವ ಭಾಗದಲ್ಲಿ ಸನ್ 2025-26ನೇ ಸಾಲಿನ ನಗರಾಭಿವೃದ್ಧಿ ಪ್ರಾಧಿಕಾರ ಅಭಿವೃದ್ಧಿ ಯೋಜನೆಯಡಿಯಲ್ಲಿ ರೂ.1.36 ಕೋಟಿ ಅನುದಾನದಲ್ಲಿ ಕೈಗೊಳ್ಳಲಾಗುವ ವಿವಿಧ ಉದ್ಯಾನಗಳ ಅಭಿವೃದ್ಧಿ ಮತ್ತು ಹೈಮಾಸ್ಟ್‌ಗಳ ಅಳವಡಿಕೆ ಕಾಮಗಾರಿಗೆ ಭೂಮಿಪೂಜೆ, ನಂತರ ವಾರ್ಡ್ ನಂ.21ರಲ್ಲಿ ಸನ್ 2025-26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿಯಲ್ಲಿ ಮಂಜೂರಿಸಲಾದ ರೂ.15 ಲಕ್ಷ ಅನುದಾನದಲ್ಲಿ ಗುರುಪಾದೇಶ್ವರ ನಗರದ ಶ್ರೀ ಯೋಗಿಶ್ವರ ಯಾಜ್ಞವಲ್ಕ ಋಷಿಗಳ ಮಂದಿರ ನಿರ್ಮಾಣ ಕಾಮಗಾರಿಗೆ ಹಾಗೂ ಕುಮುದಾ ನಗರದಲ್ಲಿ ರೂ.20 ಲಕ್ಷ ಮೊತ್ತದಲ್ಲಿ ಸವಿತಾ ಸಮಾಜ ಸಂಘದ ಸಮುದಾಯ ಭವನ ಕಟ್ಟಣ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ನಗರದಲ್ಲಿ ರಸ್ತೆ, ಒಳಚರಂಡಿ ನಿರ್ಮಾಣದ ಜೊತೆಗೆ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿದ್ದರಿಂದ ಅತ್ಯುತ್ತಮ ಗಾಳಿ ಬೀಸುವ ನಗರಗಳ ಪಟ್ಟಿಯಲ್ಲಿ ದೇಶದಲ್ಲೇ ವಿಜಯಪುರ ನಗರ 4ನೇ ಸ್ಥಾನದಲ್ಲಿದೆ. ಈ ಮೂಲಕ ವಿಜಯಪುರ ನಗರವು ದೇಶದ ಗಮನಸೆಳೆದಿದೆ. ಜೊತೆಗೆ ಎಲ್ಲ ಸಮುದಾಯಗಳ ಸಮುದಾಯ ಭವನಗಳ ನಿರ್ಮಾಣ, ದೇವಸ್ಥಾನಗಳ ಜೋರ್ಣೋದ್ಧಾರ, ಶಾಲಾ ಕೊಠಡಿಗಳನ್ನು ಸಹ ನಿರ್ಮಿಸಲಾಗಿದೆ. ನಗರದಲ್ಲಿ ಶಾಂತಿ ನೆಲೆಸುವಂತೆಯೂ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ಇದರಿಂದ ಮಹಿಳೆಯರು ಯಾರ ಭಯವಿಲ್ಲದೆ ತರಕಾರಿ ಖರೀದಿಸುವ ಜೊತೆಗೆ ನಿರ್ಭಯವಾಗಿ ನಗರದಲ್ಲಿ ಸಂಚರಿಸುತ್ತಾರೆ ಎಂದು ತಿಳಿಸಿದರು.

ಪ್ರತಿ ಭೂಮಿಪೂಜೆ ಬಳಿಕ ನೆರೆದ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ, ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದಾಗಿ ಭರವಸೆ ನೀಡಿದರು. ಮಹಾನಗರ ಪಾಲಿಕೆ ಸದಸ್ಯರಾದ ಪ್ರೇಮಾನಂದ ಬಿರಾದಾರ, ಮಲ್ಲಿಕಾರ್ಜುನ (ಕುಮಾರ) ಗಡಗಿ, ಮುಖಂಡರಾದ ಎ.ಡಿ. ದೇಶಪಾಂಡೆ, ಸತೀಶ ಕುಲಕರ್ಣಿ, ಶಂಕರ ಭಟ್ ಅಗ್ನಿಹೋತ್ರಿ, ಲಕ್ಷ್ಮೀಕಾಂತ ಕುಲಕರ್ಣಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಬೈಕ್ ಸವಾರಿ ಮಾಡಿ ಗಮನ ಸೆಳೆದ ಸಂಸದ ಜಿಗಜಿಣಗಿ



ವಿಜಯಪುರ: ಪ್ರಧಾನಿ ನರೇಂದ್ರ ಮೋದಿ ಅವರ ಮಿತ ವ್ಯಯ ಸೂತ್ರ ಪಾಲನೆ ಹಿನ್ನೆಲೆಯಲ್ಲಿ ಸಂಸದ ರಮೇಶ ಜಿಗಜಿಣಗಿ ಹೆಲ್ಮೇಟ್ ಧರಿಸಿ ಇಲೆಕ್ಟ್ರಿಕ್ ವಾಹನದ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ತೆರಳಿದರು.

ಬಿಜೆಪಿ ಮುಖಂಡ ಪಾಪುಸಿಂಗ್ ರಜಪೂತ ಅವರ ಜೊತೆ ಹೆಲ್ಮೇಟ್ ಧರಿಸಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸಿ ಎಲ್ಲರ ಗಮನ ಸೆಳೆದು ಅಚ್ಚರಿ ಮೂಡಿಸಿದರು.

ಯುದ್ಧದ ಸಂಕಷ್ಟಗಳ ಕಾಲಘಟ್ಟದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಂಧನ ಮಿತ ಬಳಕೆ, ಚಿನ್ನ ಖರೀದಿ ಮುಂದೂಡಿಕೆ ಸಲಹೆ ನೀಡಿದ್ದಾರೆ. ಈ ಸಲಹೆ ಪಾಲನೆ ಹಿನ್ನೆಲೆಯಲ್ಲಿ ನಾನು ಸಹ ಕಾರಿನ ಬಳಕೆಯನ್ನು ಸಾಕಷ್ಟು ಮಿತಿಗೊಳಿಸಿರುವೆ. ಇಲೆಕ್ಟ್ರಿಕ್ ವಾಹನ ಮೊರೆ ಹೋಗಿರುವೆ. ಬೇರೆ ದೇಶದಲ್ಲಿ ಇಂಧನ ಬೆಲೆ ಗಗನಕ್ಕೆ ಹೋಗಿದೆ. ಆದರೆ ಮೋದಿಜಿ ಅವರ ಸಮರ್ಥ ನಾಯಕತ್ವದಲ್ಲಿ ಇಂಧನ ಬೆಲೆಯನ್ನು ಜನಸಾಮಾನ್ಯರಿಗೆ ಹೊರೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ. ಜನತೆಯೂ ಮೋದಿಜಿ ಅವರ ಕೂಗಿಗೆ ಸ್ಪಂದಿಸಿದ್ದಾರೆ ಎಂದರು.

# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ನೇಮಕ

ಬಾಗಲಕೋಟೆ: ಹುನಗುಂದ ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಒಟ್ಟು 9 ಅಂಗನವಾಡಿ ಕಂ ಕ್ರಷ್ ಕೇಂದ್ರಗಳು ಮಂಜೂರಾಗಿದ್ದು, 9 ಅಂಗನವಾಡಿ ಕಂ ಕ್ರಷ್ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕಾರ್ಯಕರ್ತೆ ಹುದ್ದೆಗೆ ಮಾಸಿಕ 5500 ರೂ, ಹಾಗೂ ಕಂ ಕ್ರಷ್ ಸಹಾಯಕಿ ಹುದ್ದೆಗೆ 3 ಸಾವಿರ ರೂ.ಗಳ ಗೌರವಧನ ನಿಗಧಿಪಡಿಸಲಾಗಿದೆ. ಷರತ್ತುಗಳ ಅನುಸಾರ ಅವಶ್ಯಕ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಶೀಲ್ ಮಾಡಿದ ಪೆಟ್ಟಿಗೆಯಲ್ಲಿ ಖುದ್ದಾಗಿ ಜೂನ್ 12 ರೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅಂಚೆ, ಕೊರಿಯರ್, ಇ-ಮೇಲ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಇರುವದಿಲ್ಲವೆಂದು ಹುನಗುಂದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08351295080ಗೆ ಸಂಪರ್ಕಿಸಬಹುದಾಗಿದೆ.

# ಮೇ.21 ಕ್ಕೆ ಕಲ್ಮೇಶ್ವರ ಕಾಲೇಜಿನಲ್ಲಿ ಕ್ಯಾಂಪಸ್ ಸಂದರ್ಶನ

ಹೊಳೆಆಲೂರು: ಗದಗ ಜಿಲ್ಲೆಯ ರೋಣ ತಾಲ್ಲೂಕಿನ ಹೊಳೆಆಲೂರಲ್ಲಿ ಉತ್ತಮ ಉದ್ಯೋಗ ಉಜ್ವಲ ಭವಿಷ್ಯದ ಹಿನ್ನೆಲೆಯಲ್ಲಿ ಹೊಳೆಆಲೂರು ಹಾಗೂ ಸುತ್ತಮುತ್ತಲಿನ ಯುವಕ-ಯುವತಿಯರಿಗೆ ಉದ್ಯೋಗಾವಕಾಶ ಕಲ್ಪಿಸುವ ಮಹತ್ವದ ಉದ್ದೇಶದಿಂದ ಇಲ್ಲಿನ ಪ್ರತಿಷ್ಠಿತ ವಿದ್ಯಾಸಂಸ್ಥೆ ಕವಿಪ್ರ ಸಮಿತಿಯ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದಿಂದ ಇದೆ ಮೇ. 21ರಂದು ಕ್ಯಾಂಪಸ್ ಸಂದರ್ಶನ ಆಯೋಜಿಸಿದೆ.

ಬೆಳಿಗ್ಗೆ 10 ಕ್ಕೆ ಮಹಾವಿದ್ಯಾಲಯದ ಆವರಣದಲ್ಲಿ ನಡೆಯಲಿದ್ದು, ಟಾಟಾ, ಎಲೆಕ್ಟ್ರಾನಿಕ್ಸ್ ಮೋಟಾರ್ಸ್, ಇಂಡೋಮಿಮ್, ಮದರಸನ್ ಸೇರಿದಂತೆ ಖ್ಯಾತ ಕೈಗಾರಿಕಾ ಸಂಸ್ಥೆಗಳು ನೇರ ಸಂದರ್ಶನ ನಡೆಸಲಿದ್ದು, ಎಸ್ ಎಸ್ ಎಲ್ ಸಿ,ಪಿಯುಸಿ,ಡಿಪ್ಲೊಮಾ ಮತ್ತು ಯಾವುದೇ ಪದವಿ ಪಡೆದ 18 ರಿಂದ 26 ವರ್ಷದೊಳಗಿನ ಯುವಕರು/ಯುವತಿಯರು ಹೆಚ್ಚಿನ ಸಂಖ್ಯೆ ಯಲ್ಲಿ ಭಾಗವಹಿಸಬೇಕೆಂದು ಪ್ರಾಚಾರ್ಯ ಡಾ.ಎಸ್.ಬಿ.ಸಜ್ಜನರ ಹೇಳಿದ್ದಾರೆ.

ಅಭ್ಯರ್ಥಿಗಳು ಅಂಕಪಟ್ಟಿ, ಆಧಾರ್, ಪಾನ್ ಕಾರ್ಡ್ ಹಾಗೂ ಪಾಸ್‌ಪೋರ್ಟ್ ಗಾತ್ರದ ಎರಡು ಭಾವಚಿತ್ರಗಳನ್ನು ತರಬೇಕು. ಒಟ್ಟು ನಾಲ್ಕು ಸೆಟ್ ಮಾಡಿಕೊಂಡು ಬರಬೇಕೆಂದು ಸೂಚಿಸಲಾಗಿದೆ. ಸ್ಥಳದಲ್ಲೇ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.ಮಾಹಿತಿಗೆ ಮೊ-



9353338277,ಮೊ-9632966801 ಸಂಪರ್ಕಿಸಬಹುದು. ಕಾರ್ಯಕ್ರಮದ ಅಧ್ಯಕ್ಷತೆ ಯನ್ನು ಪ್ರಾಚಾರ್ಯ ಡಾ. ಎಸ್. ಬಿ.ಸಜ್ಜನರ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಸಂಸ್ಥೆ ಅಧ್ಯಕ್ಷ ಬಿ.ಸಿ. ಪಾಟೀಲ ಹಾಗೂ ವಿವಿಧ ಗಣ್ಯರು ಭಾಗವಹಿಸಲಿದ್ದಾರೆ ಎಂದು ಆಯೋಜಕರಾದ ಡಾ.ಕುಮಾರ ವೈ.ಹಂಜಗಿ ತಿಳಿಸಿದ್ದಾರೆ.

# ಕರ್ತವ್ಯದ ಸ್ಥಳ ಸೇರಿದಂತೆ ಎಲ್ಲೆಡೆ ಮಹಿಳೆಯರಿಗೆ ಸುರಕ್ಷಿತ ಹಾಗೂ ಗೌರವಯುತ ವಾತಾವರಣ ಸಿಗಬೇಕು: ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ

ಧಾರವಾಡ: ಕೆಲಸದ ಸ್ಥಳಗಳಲ್ಲಿ ಮಹಿಳೆಯರಿಗೆ ಸುರಕ್ಷಿತ ಮತ್ತು ಗೌರವಯುತ ವಾತಾವರಣ ನಿರ್ಮಾಣವಾಗಬೇಕು. ಮತ್ತು ಮಹಿಳೆಯರು ದೈಹಿಕವಾಗಿ ಹಾಗೂ ಮಾನಸಿಕವಾಗಿ ಆರೋಗ್ಯದಿಂದ ಇದ್ದಾಗ ಮಾತ್ರ ಆತ್ಮಸ್ಥೈರ್ಯದಿಂದ ತಮ್ಮ ಕೆಲಸವನ್ನು ಸಮರ್ಪಕವಾಗಿ ನಿರ್ವಹಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸಹದ್ಯೋಗಿಗಳ ಮತ್ತು ಸಾರ್ವಜನಿಕರ ಸಹಕಾರ ಮುಖ್ಯವಾಗಿದ್ದು, ಇಲಾಖೆಯ ಅಧಿಕಾರಿಗಳು ಜನಜಾಗೃತಿ ಕಾರ್ಯಕ್ರಮ ಗಳನ್ನು ಹಮ್ಮಿಕೊಳ್ಳಬೇಕೆಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌದರಿ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಆಯೋಜಿಸಿದ್ದ ಕರ್ತವ್ಯದ ಸ್ಥಳದಲ್ಲಿ ಮಹಿಳೆಯರ ಲೈಂಗಿಕ ದೌರ್ಜನ್ಯ (ನಿರೋಧ, ನಿರ್ಬಂಧನೆ ಹಾಗೂ ನಿವಾರಣೆ-POSH) ಅಧಿನಿಯಮ 2013 ರ ತರಬೇತಿ ಹಾಗೂ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ಹಾಗೂ ಲೈಂಗಿಕ ದೌರ್ಜನ್ಯ, ಮಾನಸಿಕ ಕಿರುಕುಳ ಘಟನೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪ್ರತಿಯೊಂದು ಸಂಸ್ಥೆಯಲ್ಲೂ ಸುರಕ್ಷತಾ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಮಹಿಳೆಯರ ದೂರುಗಳನ್ನು ಗೌಪ್ಯವಾಗಿ ಸ್ವೀಕರಿಸಲು ಶೀ ಬಾಕ್ಸ್ (ಖುಜ ಃಠಥ) ವ್ಯವಸ್ಥೆ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ಹೇಳಿದರು.

ಮಹಿಳೆಯರು ತಮ್ಮ ಮೇಲೆ ನಡೆಯುವ ಯಾವುದೇ ರೀತಿಯ ಅನ್ಯಾಯ, ಕಿರುಕುಳ ಅಥವಾ ದೌರ್ಜನ್ಯಗಳನ್ನು ಮೌನವಾಗಿ ಸಹಿಸಿಕೊಳ್ಳದೇ, ಧೈರ್ಯವಾಗಿ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಜೊತೆಗೆ ಘಟನೆಗಳ ಬಗ್ಗೆ ದೂರು ದಾಖಲಿಸಲು ಮುಂದಾಗಬೇಕು ಎಂದು ಅವರು ಹೇಳಿದರು.

ಸಮಾಜದಲ್ಲಿ ಮಹಿಳೆಯರ ಗೌರವ ಮತ್ತು ಸುರಕ್ಷತೆ ಕಾಪಾಡುವುದು



ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮಹಿಳೆಯರಿಗೆ ಸುರಕ್ಷಿತ ಕೆಲಸದ ವಾತಾವರಣ ಒದಗಿದಾಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯವೆಂದು ಅವರು ತಿಳಿಸಿದರು.

ಧಾರವಾಡ ಜಿಲ್ಲೆಯಲ್ಲಿ ಪೊಲೀಸರು ಮಹಿಳಾ ಸ್ನೇಹಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದು ತಿಳಿದು ಬಹಳ ಸಂತೋಷವಾಗಿದೆ. ಮಹಿಳೆಯರ ಸುರಕ್ಷತೆ, ಗೌರವ ಮತ್ತು ನ್ಯಾಯಕ್ಕಾಗಿ ಪೊಲೀಸರು ಕೈಗೊಳ್ಳುತ್ತಿರುವ ಕ್ರಮಗಳು ಸಮಾಜದಲ್ಲಿ ವಿಶ್ವಾಸ ಮೂಡಿಸುತ್ತಿವೆ. ಮಹಿಳೆಯರ ಸಮಸ್ಯೆಗಳಿಗೆ ಸ್ಪಂದಿಸಿ, ಅವರೊಂದಿಗೆ ಆತ್ಮೀಯವಾಗಿ ನಡೆದುಕೊಳ್ಳುತ್ತಿರುವ ಪೊಲೀಸ್ ಇಲಾಖೆಯ ಕಾರ್ಯ ಶ್ಲಾಘನೀಯವಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ ಅವರು ಮಾತನಾಡಿ, ಯಾವುದೇ ಸರಕಾರಿ, ಖಾಸಗಿ ಕಚೇರಿಗಳು ಮತ್ತು ಕೈಗಾರಿಕೆಗಳಲ್ಲಿ ಹತ್ತು ಮತ್ತು ಹತ್ತಕ್ಕಿಂತ ಹೆಚ್ಚು ದುಡಿಯುವ ಮಹಿಳೆಯರು ಇದ್ದಲ್ಲಿ ಕಡ್ಡಾಯವಾಗಿ ಶೀ ಬಾಕ್ಸ್ ಅಳವಡಿಸಬೇಕು. ಅಲ್ಲಿನ ಮಹಿಳೆಯರು ತಮಗೆ ಲೈಂಗಿಕ ದೌರ್ಜನ್ಯ, ಲೈಂಗಿಕ ಕಿರುಕುಳ ಉಂಟಾದರೆ ಶೀ ಬಾಕ್ಸ್‌ದಲ್ಲಿ ಹಾಕಬೇಕು ಎಂದು ಅವರು ಹೇಳಿದರು.

ಸರ್ಕಾರಿ ಹಾಗೂ ಖಾಸಗಿ ಕಚೇರಿಗಳಲ್ಲಿ ಮಹಿಳೆಯರ ಮೇಲೆ ಯಾವುದೇ ರೀತಿಯ ಶೋಷಣೆ, ಲೈಂಗಿಕ ಕಿರುಕುಳ ಅಥವಾ ಅನ್ಯಾಯ ನಡೆದಿದ್ದರೆ ಅದನ್ನು ಮೌನವಾಗಿ ಸಹಿಸಿಕೊಳ್ಳದೆ ಧೈರ್ಯದಿಂದ ಎದುರಿಸಿ ಪೊಲೀಸ್ ಇಲಾಖೆಗೆ ತಿಳಿಸಬೇಕು ಎಂದು ಅವರು ತಿಳಿಸಿದರು.

ಕೆಲಸದ ಸ್ಥಳಗಳಲ್ಲಿ ಮಹಿಳೆಯರಿಗೆ ಸುರಕ್ಷಿತ ಮತ್ತು ಗೌರವಯುತ ವಾತಾವರಣ ಕಲ್ಪಿಸುವುದು ಪ್ರತಿಯೊಂದು ಸಂಸ್ಥೆಯ ಜವಾಬ್ದಾರಿಯಾಗಿದೆ, ಉನ್ನತ ದರ್ಜೆಯ ಅಧಿಕಾರಿಗಳು ತಮ್ಮ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ ಮಹಿಳಾ ಸಿಬ್ಬಂದಿಯ ಸಮಸ್ಯೆಗಳು, ಸುರಕ್ಷತೆ ಹಾಗೂ ಮಾನಸಿಕ ನೆಮ್ಮದಿಯ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು. ಮಹಿಳೆಯರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಮಹಿಳೆಯರ ಮೇಲಿನ ದೌರ್ಜನ್ಯ ಮತ್ತು ಶೋಷಣೆಯನ್ನು ತಡೆಯಲು ಪೊಲೀಸ್ ಇಲಾಖೆ ಸದಾ ಸಿದ್ಧವಾಗಿದ್ದು, ದೂರು ನೀಡುವ ಮಹಿಳೆಯರ ಗೌಪ್ಯತೆ ಕಾಪಾಡಲಾಗುತ್ತದೆ. ಮಹಿಳೆಯರು ತಮ್ಮ ಹಕ್ಕುಗಳ ಬಗ್ಗೆ ಅರಿವು ಹೊಂದಿ, ಅನ್ಯಾಯದ ವಿರುದ್ಧ ಧೈರ್ಯವಾಗಿ ಧ್ವನಿ ಎತ್ತಬೇಕು ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಎಚ್.ಎಚ್.ಕುಕನೂರ ಅವರು ಸ್ವಾಗತಿಸಿ, ಪ್ರಸ್ತಾಪವಾಗಿ ಮಾತನಾಡಿದರು.

ವೇದಿಕೆಯಲ್ಲಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಗೊಂಜನ್ ಆರ್ಯ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ ಉಪ ನಿರ್ದೇಶಕ ಬಿ .ಎಚ್. ಕೃಷ್ಣಪ್ಪ, ಸ್ಥಳೀಯ ದೂರು ನಿವಾರಣ ಸಮಿತಿಯ ಅಧ್ಯಕ್ಷೆ ಡಾ.ಸಂಗೀತ ಮಾನೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ನ್ಯಾಯವಾಧಿ ಆಶಾ ಪ್ರಳಯಕಲ್ಮಠ ಅವರು ಇದ್ದರು.

ಕಾರ್ಯಕ್ರಮದಲ್ಲಿ ಎಲ್ಲ ಜಿಲ್ಲಾಮಟ್ಟದ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಇಲಾಖೆಯ ಸಿಬ್ಬಂದಿ ವರ್ಗದವರು ಉಪಸಿತರಿದ್ದರು.

# ಗ್ರಾಮೀಣ ಭಾಗದ ಮಕ್ಕಳಿಗೆ ಅತ್ಯುತ್ತಮ ಶೈಕ್ಷಣಿಕ ಸೌಲಭ್ಯಗಳು ಸಿಗಬೇಕು : ಶಾಸಕ ಲಕ್ಷ್ಮಣ ಸವದಿ



ಅಥಣಿ: ಗ್ರಾಮೀಣ ಭಾಗದ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು. ಅದರಲ್ಲೂ ವಿಶೇಷವಾಗಿ ಬಡವರ ರೈತರ ಮಕ್ಕಳು ತಾವಿರುವ ಗ್ರಾಮಗಳಲ್ಲಿಯೇ ಉನ್ನತ ಗುಣಮಟ್ಟದ ಅತ್ಯುತ್ತಮ ಶಿಕ್ಷಣ ದೊರೆಯಬೇಕು ಎನ್ನುವುದು ನನ್ನ ಮುಖ್ಯ ಉದ್ದೇಶವಾಗಿದೆ ಎಂದು ಶಾಸಕ ಲಕ್ಷ್ಮಣ ಸವದಿ ಅವರು ತಿಳಿಸಿದರು.

ಅವರು ತಾಲೂಕಿನ ಕೊಕಟನೂರ ಗ್ರಾಮದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ 2025–26ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ಎನ್.ಎಸ್.ಎಸ್, ರೆಡ್ ಕ್ರಾಸ್, ಸ್ಕೌಟ್ ಮತ್ತು ಗೈಡ್ಸ್ ಚಟುವಟಿಕೆಗಳ ಸಮಾರೋಪ. ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ನೂತನ ಸಭಾಂಗಣದ ಉದ್ಘಾಟನಾ ಸಮಾರಂಭವನ್ನು ನೆರವೇರಿಸಿ ಅವರು ಮಾತನಾಡುತ್ತಿದ್ದರು.

ಈ ಭಾಗದಲ್ಲಿ ಶಿಕ್ಷಣದ ಹಬ್ಬವನ್ನು ಆಚರಿಸಬೇಕೆಂಬುದು ನನ್ನ ಆಸೆಯಾಗಿದೆ. ಅದನ್ನು ಪೂರ್ಣ ಪ್ರಮಾಣದಲ್ಲಿ ನನಸು ಮಾಡಲು ನಾನು ಬದ್ಧನಾಗಿದ್ದೇನೆ. ಕ್ಷೇತ್ರ ಹಾಗೂ ಶಿಕ್ಷಣ ಸಂಸ್ಥೆಯ ಯಾವುದೇ ಅಭಿವೃದ್ಧಿ ಕೆಲಸಗಳು ಯಶಸ್ವಿಯಾಗಬೇಕಾದರೆ ಪ್ರತಿಯೊಬ್ಬರೂ ಕೈಜೋಡಿಸಿ ಸಹಕಾರ ನೀಡಬೇಕು," ಎಂದು ಕರೆ ನೀಡಿದರು.

ಈ ಕಾಲೇಜಿಗೆ ಸರ್ಕಾರದಿಂದ ಬೇಕಾಗುವ ಎಲ್ಲ ಅಗತ್ಯ ಮೂಲಸೌಲಭ್ಯಗಳನ್ನು ಶೀಘ್ರದಲ್ಲೇ ತಂದುಕೊಡುವ ಕೆಲಸ ಮಾಡುತ್ತೇನೆ. ಕಾಲೇಜಿನ ಆವರಣದಲ್ಲಿ ಪರಿಸರವನ್ನು ರಕ್ಷಿಸಲು ಮತ್ತು ಉತ್ತಮ ವಾತಾವರಣ ನಿರ್ಮಿಸಲು ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಹೆಚ್ಚಿನ ಸಂಖ್ಯೆಯಲ್ಲಿ ಗಿಡ ಮರಗಳನ್ನು ನೆಡುವ ಕೆಲಸ ಮಾಡಬೇಕು," ಎಂದು ಶಾಸಕರು ಕಿವಿಮಾತು ಹೇಳಿದರು.

"ಕ್ಷೇತ್ರದಲ್ಲಿ ಶೈಕ್ಷಣಿಕ ಅಭಿವೃದ್ಧಿ" 

ಗ್ರಾಮೀಣ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ತಾಲೂಕಿನಲ್ಲಿ ಈಗಾಗಲೇ 11 ಹೊಸ ಹೈಸ್ಕೂಲಗಳನ್ನು ಆರಂಭಿಸಲಾಗಿದೆ. ತಾಲೂಕಿಗೆ ಒಟ್ಟು 3 ಕರ್ನಾಟಕ ಪಬ್ಲಿಕ್ ಶಾಲೆಗಳು (ಕೆಪಿಎಸ್ಸಿ)ಮಂಜೂರಾಗಿದ್ದು, ಅದರಲ್ಲಿ ಒಂದು ಶಾಲೆಯನ್ನು ಕೊಕಟನೂರ ಗ್ರಾಮಕ್ಕೇ ನೀಡಲಾಗಿದೆ. ಈ ಭಾಗದ ಹೆಣ್ಣುಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡಲು ಮಹಿಳೆಯರಿಗಾಗಿ ಪ್ರತ್ಯೇಕ ವಸತಿ ಶಾಲೆ ನಿರ್ಮಾಣಕ್ಕೆ ಈಗಾಗಲೇ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.ತಾಲೂಕಿನ ಶಾಲಾ–ಕಾಲೇಜುಗಳಲ್ಲಿ ಡಿಜಿಟಲ್ ಕ್ಲಾಸ್‌ರೂಂ, ಸುಸಜ್ಜಿತ ಪ್ರಯೋಗಾಲಯ ಹಾಗೂ ಗ್ರಂಥಾಲಯಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಕೊಕಟನೂರ ಗ್ರಾಮದಲ್ಲಿ ಸರಕಾರಿ ಜಾಗ ಹೆಚ್ಚಿಗೆ ಇರುವುದರಿಂದಲೇ ನಮಗೆ ಎಲ್ಲ ರೀತಿಯ ಶಾಲಾ–ಕಾಲೇಜುಗಳನ್ನು ಮತ್ತು ಸರಕಾರಿ ಯೋಜನೆಗಳನ್ನು ಇಲ್ಲಿಗೆ ತರಲು ಸಾಧ್ಯವಾಗುತ್ತಿದೆ. ಆದ್ದರಿಂದ ಸಾರ್ವಜನಿಕರು ಯಾರೂ ಕೂಡ ಸರಕಾರಿ ಜಾಗವನ್ನು ಒತ್ತುವರಿ ಮಾಡಬಾರದು. ಕಾಲೇಜು ಆಡಳಿತ ಮಂಡಳಿಯು ಸಹ ತಮಗೆ ಸೇರಿದ ಜಾಗದ ಹದ್ದುಬಸ್ತಿ (ಸರ್ವೆ) ಮಾಡಿಸಿ, ಜಾಗವನ್ನು ವ್ಯವಸ್ಥಿತವಾಗಿ ರಕ್ಷಿಸಿಕೊಳ್ಳಬೇಕು, ಎಂದು ಶಾಸಕರು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಕಾಲೇಜು ಮಟ್ಟದ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿನಿಯರನ್ನು ಪ್ರಶಸ್ತಿ ನೀಡಿ ಸತ್ಕರಿಸಲಾಯಿತು. ಅಂತಿಮ ವರ್ಷದ ವಿದ್ಯಾರ್ಥಿಗಳು ಶಾಸಕ ಲಕ್ಷ್ಮಣ ಸವದಿ ಅವರಿಗೆ ಆತ್ಮೀಯವಾಗಿ ಸತ್ಕರಿಸಿ ಗೌರವ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮುಖಂಡರಾದ ಶಾಮ ಪೂಜಾರಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಾಲೇಜಿನ ಬೆಳವಣಿಗೆಯನ್ನು ವಿವರಿಸಿದರು.

ವೇದಿಕೆಯಲ್ಲಿ ಕಾಲೇಜಿನ ಪ್ರಾಚಾರ್ಯರಾದ ಡಾ. ಪ್ರಭಾಕರ ಆರ್. ಖ್ಯಾಡಿ, ಮುಖಂಡರಾದ ವಿಶಾಲ ದೇಸಾಯಿ, ಶಿವಾನಂದ ದಿವಾನಮಳ, ಅಬ್ದುಲ್ ಹಮೀದ್, ಕುಮಾರಿ ಡಾ. ಉಮಾಶ್ರೀ ಕುಲಕರ್ಣಿ ಸೇರಿದಂತೆ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಹುಸೇನ ಗಡ್ಡೇಕರ ವಿನೂತನವಾಗಿ ನಿರೂಪಿಸಿದರು, ವಿಜಯ ಕುಮಾರ್ ಬಡಿಗೇರ ಸ್ವಾಗತಿಸಿದರು ಹಾಗೂ ರಮೇಶ ಸಕ್ರಿ ವಂದಿಸಿದರು.

**"ಇದೇ ಮೇ 24 ರಂದು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ"**

ಈ ಸಾಲಿನಲ್ಲಿ ಪಿಯುಸಿ ಮತ್ತು ಎಸ್ಎಸ್ಎಲ್ಸಿ ಪರೀಕ್ಷೆಗಳಲ್ಲಿ ಶೇಕಡಾ 85 ಕ್ಕಿಂತ ಹೆಚ್ಚು ಅಂಕ ಪಡೆದು ಸಾಧನೆಗೈದ ತಾಲೂಕಿನ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 'ಕೃಷ್ಣಾ ರೈತ ಭವನ'ದಲ್ಲಿ ಸತ್ಕಾರ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು," ಎಂದು ಶಾಸಕ ಲಕ್ಷ್ಮಣ ಸವದಿ ವಿನಂತಿಸಿದರು.

# ನರೇಗಾ ಕಾಮಗಾರಿ ಸ್ಥಳಕ್ಕೆ ಪ್ರಕಾಶ ವಡ್ಡರ ಭೇಟಿ: ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ



ವಿಜಯಪುರ: ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಅವರು ಸೋಮವಾರ ಬಬಲೇಶ್ವರ ತಾಲೂಕಿನ ಹೊನಗನಹಳ್ಳಿ ಹಾಗೂ ಕಾರಜೊಳ ಗ್ರಾಪಂ ನರೇಗಾ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಮತ್ತು ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಹೊನಗನಹಳ್ಳಿ ಗ್ರಾಮದ ತುಂಗಾಬಾಯಿ ಬಿದರಿ ಇವರ ಹೊಲದಿಂದ ಪಾರ್ವತಿಬಾಯಿ ಪಾಟೀಲ್ ಇವರ ಹೊಲದವರೆಗೆ ಡೋಣಿ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ನಂತರ ನರೇಗಾ ಕಾರ್ಮಿಕರೊಂದಿಗೆ ಸಮಾಲೋಚಿಸಿದ ಅವರು, ಎಲ್ಲ ಕೂಲಿಕಾರರು ಪ್ರತಿ ದಿನ ಬೆಳಿಗ್ಗೆ ಬೇಗನೆ ಆಗಮಿಸಿ ಬೇಗ ಕೆಲಸ ಮುಗಿಸಿ ಬೇಗ ಮನೆಗೆ ತೆರಳಬಹುದು ಎಂದರು.

ಬೇಸಿಗೆಯಿರುವುದರಿಂದ ಆರೋಗ್ಯ ಸಮಸ್ಯೆಗಳು ಉಂಟಾಗಬಹುದು. ಹಾಗಾಗಿ ಎಲ್ಲರೂ ಆರೋಗ್ಯ ಕಾಳಜಿ ವಹಿಸಬೇಕು. ಜೊತೆಗೆ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರು ನರೇಗಾ ಕೆಲಸದಲ್ಲಿ ಭಾಗವಹಿಸುವ ಮೂಲಕ ನರೇಗಾ ಸೌಲಭ್ಯ ಪಡೆದುಕೊಳ್ಳಬೇಕು ಎಂದರು.

ಗ್ರಾಮ ಮಟ್ಟದಲ್ಲಿರುವ ಎಲ್ಲ ಸಾರ್ವಜನಿಕರಿಗೆ, ಸ್ವ ಸಹಾಯ ಸಂಘಗಳ ಮಹಿಳೆಯರಿಗೆ ನರೇಗಾ ಯೋಜನೆಯ ಕುರಿತು ಜಾಗೃತಿ ಮೂಡಿಸಿ, ಕೂಲಿ ಕೆಲಸಕ್ಕೆ ಹೆಚ್ಚಿನ ಜನರು ಬರುವಂತೆ ಕ್ರಮ ಕೈಗೊಳ್ಳಬೇಕು ಎಂದು ತಾಲೂಕು ಐಇಸಿ ಸಂಯೋಜಕರಿಗೆ ಸೂಚಿಸಿದರು.

ಬಳಿಕ ಗ್ರಾಮ ಪಂಚಾಯತಿ ಕಾರ್ಯಾಲಯಕ್ಕೆ ಭೇಟಿ ನೀಡಿದ ಉಪ ಕಾರ್ಯದರ್ಶಿಗಳು, ಗ್ರಾಪಂ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಾತಿ ಪರಿಶೀಲಿಸಿ, ಅವರ ಕಾರ್ಯವೈಖರಿಗಳ ಬಗ್ಗೆ ಪರಿಶೀಲಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳಾದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಪ್ರಗತಿ, ಕೂಲಿಕಾರರ ಇಕೆವೈಸಿ, ತೆರಿಗೆ ವಸೂಲಾತಿ, ಸಕಾಲ ಅರ್ಜಿ, ಸಿಬ್ಬಂದಿ ಇ–ಹಾಜರಾತಿ ಹೀಗೆ ವಿವಿಧ ವಿಷಯಗಳ ಪ್ರಗತಿ ಕುರಿತು ಪರಿಶೀಲನೆ ನಡೆಸಿದರು.

ಬಳಿಕ ಕಾರಜೊಳ ಗ್ರಾಮ ಪಂಚಾಯತಿಗೆ ಭೇಟಿ ನೀಡಿ, ಗ್ರಾಮ ಪಂಚಾಯತಿ ಕಟ್ಟಡ ಕಾಮಗಾರಿ ಪರಿಶೀಲಿಸಿದರು. ಇದೇ ವೇಳೆ ಈ ಗ್ರಾ.ಪಂ. ನಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಹೆಚ್ಚಿನ ಕೂಲಿಕಾರರಿಗೆ ಉದ್ಯೋಗ ಒದಗಿಸುವುದು ಮತ್ತು ನಿಗದಿತ ಗುರಿಗೆ ತಕ್ಕಂತೆ ಮಾನವ ದಿನಗಳ ಸೃಜನೆ ಮಾಡಬೇಕು ಎಂದು ಸೂಚನೆ ನೀಡಿದರು.

ನಿಗದಿತ ಸಮಯದಲ್ಲಿ ಕೂಲಿ ಪಾವತಿ, ನರೇಗಾ ಕೂಲಿಕಾರರ ಇ–ಕೆವೈಸಿ, ಕಾಮಗಾರಿಗಳ ಮುಕ್ತಾಯ, ನರೇಗಾ ಕೂಲಿಕಾರರ ಎನ್ ಎಂಎಂಎಸ್ ಫೇಸ್ ಅಥೆಂಟಿಕೇಷನ್, ಯುಕ್ತದಾರದಲ್ಲಿ ಕಾಮಗಾರಿ ಎಂಟ್ರಿ ಮಾಡುವುದು, ಕಾಮಗಾರಿ ಮುಕ್ತಾಯ ಸಾಮಾಜಿಕ ಪರಿಶೋಧನೆ, ಪ್ರಗತಿ ವರದಿ, ಅಡಹಾಕ್ ಸಭೆ, ನರೇಗಾ ಕಾಮಗಾರಿಗಳ ಮುಕ್ತಾಯ, ಪಂಚಾಯತ ರಾಜ್ ವಿಷಯಗಳಾದ ತೆರಿಗೆ ವಸೂಲಾತಿ, ಇ–ಹಾಜರಾತಿ, ಮಹಿಳಾ ಗ್ರಾಮ ಸಭೆ, ಕುಡಿಯುವ ನೀರಿನ ಸಮಸ್ಯೆ ಹೀಗೆ ವಿವಿಧ ವಿಷಯಗಳ ಕುರಿತು ಪರಿಶೀಲಿಸಿದರು.

# ನಿವೃತ್ತ ಯೋಧನ ಅಭಿನಂದನಾ ಕಾರ್ಯಕ್ರಮ



ನವಲಗುಂದ: ಭಾರತೀಯ ಸೈನ್ಯದಲ್ಲಿ ಸುಧೀರ್ಘವಾಗಿ ಮೂವತ್ತು ವರ್ಷಗಳ ಕಾಲ ಸೇವೆ ಸಲ್ಲಿಸಿದ ಮಹಮ್ಮದ ರಫಿಕ ಮಟ್ಟಿಗಾರ ಅವರ ಸೇವೆಯು ಸಾರ್ಥಕತೆಯನ್ನು ಹೊಂದಿದೆ ಎಂದು ನವಲಗುಂದ ಗವಿಮಠದ ಬಸವಲಿಂಗ ಸ್ವಾಮೀಜಿ ನುಡಿದರು.

ಪಟ್ಟಣದ ಶಿಕ್ಷಕರ ಸಹಕಾರಿ ಕಲ್ಯಾಣ ಕೇಂದ್ರದಲ್ಲಿ ಆಯೋಜಿಸಿದ್ದ ನಿವೃತ್ತ ಯೋಧರಿಗೆ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಈ ದೇಶದಲ್ಲಿ ನಿಜವಾದ ಹೀರೋ ನಮ್ಮ ಸೈನಿಕರು, ನಾವು ಜೀವನದಲ್ಲಿ ಜನ್ಮ ಕೊಟ್ಟ ತಂದೆ–ತಾಯಿ, ಅನ್ನ ಕೊಟ್ಟ ರೈತ, ವಿದ್ಯೆ ಕೊಟ್ಟ ಗುರು ಹಾಗೂ ದೇಶ ಕಾದಂತಹ ಸೈನಿಕರನ್ನು ಮರೆಯಬಾರದು ಎಂದರು.

ಜನಸ್ನೇಹಿ ಪೊಲೀಸ್ ಠಾಣೆಯ ಪಿ.ಎಸ್.ಐ ಜನಾರ್ಧನ ಭಟ್ರಳ್ಳಿ ಮಾತನಾಡಿ ಭಾರತಿಯ ಸೈನ್ಯದಲ್ಲಿ ಸೇವೆ ಸಲ್ಲಿಸಿ ಅವರು ಮಾಡಿರುವಂತಹ ತ್ಯಾಗ ಚಿರಋಣಿ, ಅವರು ಸೇವಾವಧಿಯಲ್ಲಿ ಮಾಡಿರುವಂತಹ ತ್ಯಾಗ ವರ್ಣಿಸಲು ಸಾಧ್ಯವಿಲ್ಲ, ಮೂವತ್ತು ವರ್ಷ ಸೇವೆ ಸಲ್ಲಿಸಿ ಮನೆಗೆ ಮರಳಿ ಬಂದಿದ್ದಾರೆ, ಸೈನಿಕರ ಧೈರ್ಯ, ಶೌರ್ಯಕ್ಕೆ ಸಾಟಿ ಯಾವುದು ಇಲ್ಲಾ ಎಂದರು.

ಶರಣ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಎ.ಬಿ ಕೊಪ್ಪದ ಮಾತನಾಡಿ ದೇಶದ ಗಡಿಯೊಳಗೆ ಚಳಿ ಮಳೆಯನ್ನು ಲೆಕ್ಕಿಸದೆ ದೇಶದ ಸೇವೆ ಸಲ್ಲಿಸಿ ಬಂದಿದ್ದು ಖುಷಿ ತಂದಿದೆ, ನಾವು ನೆಮ್ಮದಿಯಿಂದ ಇರಲು ಮೂಲ ಕಾರಣ ನಮ್ಮ ಸೈನಿಕರು, ಅವರು ತಮ್ಮ ಜೀವವನ್ನು ಲೆಕ್ಕಿಸದೆ ಹೋರಾಟ ಮಾಡಿ ಸೇವೆ ಸಲ್ಲಿಸಿ ಮಾತೃ ಭೂಮಿಗೆ ಬರುವುದು ಎಂದರೆ ಅದು ಮರು ಜನ್ಮ ಪಡೆದಂತೆ, ಅವರು ತಮ್ಮ ಕುಟುಂಬವನ್ನು ಬಿಟ್ಟು ಹೋಗುವುದು ಸಾಮಾನ್ಯವಾದ ಕೆಲಸವಲ್ಲ ಅಂತಹ ಸೈನಿಕರ ತ್ಯಾಗವನ್ನು ನಾವು ಸ್ಮರಿಸಬೇಕು ಎಂದರು.

ಈ ಮೊದಲು ನಿವೃತ್ತ ಯೋಧ ಮಹಮ್ಮದರಫಿಕ್ ಇಮಾಮಸಾಬ ಮಟ್ಟಿಗಾರ ಅವರು ತಮ್ಮ ಕುಟುಂಬಸ್ಥರೊಂದಿಗೆ ಪಟ್ಟಣದ ರೈತಭವನದ ಪಕ್ಕದಲ್ಲಿನ ವೀರಗಲ್ಲಿಗೆ ಮಾಲಾರ್ಪಣೆ ಮಾಡಿ, ರೈತ ಭವನದಲ್ಲಿ ಸನ್ಮಾನ ಸ್ವೀಕರಿಸಿ ನಂತರ , ತ್ಯಾಗವೀರ ಲಿಂಗರಾಜ ದೇಸಾಯಿಯವರ ಮೂರ್ತಿಗೆ ಮಾಲಾರ್ಪಣೆ, ಅಲ್ಲಿಂದ ಪೊಲೀಸ್ ಠಾಣೆಯಲ್ಲಿರುವ ಹುತಾತ್ಮ ಪೊಲೀಸರ ವೀರಗಲ್ಲಿಗೆ ಗೌರವ ಸಮರ್ಪಣೆ ಸಲ್ಲಿಸಿದ ನಂತರ ಶಿಕ್ಷಕರ ಸಹಕಾರಿ ಕಲ್ಯಾಣ ಕೇಂದ್ರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಈ ಸಂದರ್ಭದಲ್ಲಿ ಮುಸ್ಲಿಂ ಧರ್ಮ ಗುರುಗಳಾದ ಸೈಯ್ಯದ ಅಮಾನುಲ್ಲಾ ಖಾಜಿ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ನಾಗನಗೌಡ್ರ ಪಾಟೀಲ್, ರಾಮಚಂದ್ರ ತಹಶೀಲ್ದಾರ, ರಾಯನಗೌಡ ಪಾಟೀಲ, ರಿಯಾಜಅಹ್ಮದ ಪಿರಜಾದೆ, ಸುಭಾಷಚಂದ್ರಗೌಡ್ರ ಪಾಟೀಲ್, ಎಮ್.ಜೆ ನದಾಫ, ಎನ್. ಕೆ ಕರ್ಜಗಿ, ಬಸನಗೌಡ ಪಾಟೀಲ್, ಮಂಜುನಾಥ ಸುಬೇದಾರ, ರವಿ ತೋಟದ, ಮಾಬುಸಾಬ ಯರಗುಪ್ಪಿ, ಬಶೀರಅಹ್ಮದ ಹುನಗುಂದ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಸರ್ಕಾರದಿಂದ ಜನಸಾಮಾನ್ಯರ ಮೇಲೆ ಬೆಲೆ ಏರಿಕೆಯ ಬರೆ: ರಾಜಶೇಖರ್ ಮ್ಯಾಗೇರಿ ಆಕ್ರೋಶ



ಮುದ್ದೇಬಿಹಾಳ: ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಜನಸಾಮಾನ್ಯರ ಮೇಲೆ ನಿರಂತರವಾಗಿ ಬೆಲೆ ಏರಿಕೆಯ ಬರೆ ಹಾಕುತ್ತಿರುವುದು ಅತ್ಯಂತ ಖಂಡನೀಯ ಎಂದು ಭಾಜಪಾ ಮುಖಂಡ ರಾಜಶೇಖರ್ ಮ್ಯಾಗೇರಿ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ ಆಧಾರರಹಿತ ಆರೋಪಗಳನ್ನು ಮಾಡುತ್ತಾ, ರಾಜ್ಯದಲ್ಲಿ ತಮ್ಮ ಸ್ವಾರ್ಥ ರಾಜಕಾರಣಕ್ಕಾಗಿ ಜನರ ಜೇಬಿಗೆ ಕತ್ತರಿ ಹಾಕುತ್ತಿದ್ದಾರೆ" ಎಂದು ದೂರಿದ್ದಾರೆ.

ರಾಜ್ಯ ಸರ್ಕಾರದ ಜನವಿರೋಧಿ ನೀತಿಗಳ ಕುರಿತು ಅವರು ಪ್ರಮುಖವಾಗಿ ಈ ಕೆಳಗಿನ ಅಂಶಗಳನ್ನು ಪ್ರಸ್ತಾಪಿಸಿದ್ದಾರೆ:

**ಬಡವರ ವಿರೋಧಿ ಅಬಕಾರಿ ನೀತಿ:** ರಾಜ್ಯ ಸರ್ಕಾರವು ಕಳೆದ ಎರಡು ವರ್ಷಗಳಲ್ಲಿ ಐದನೇ ಬಾರಿಗೆ ಮದ್ಯದ ದರವನ್ನು ಏರಿಸಿದೆ. ಇತ್ತೀಚೆಗೆ ಜಾರಿಗೆ ಬಂದ ನೂತನ ಅಬಕಾರಿ ನೀತಿಯಲ್ಲಿ, ಸಾಮಾನ್ಯ ಜನರು ಸೇವಿಸುವ ಬ್ರಾಂಡ್‌ಗಳಾದ 7 ಖಣಚಿಡಿ, ಃಚಿಂ–ಖಿಡಿಜಡಿ, ಖಂಧಿಚಿಟ ಥಿಚಿಟಟಜಟಿಂಜ ಗಳ ಮೇಲೆ ಶೇ.30 ರಷ್ಟು ತೆರಿಗೆ ಹೆಚ್ಚಿಸಲಾಗಿದೆ. ಆದರೆ ಪ್ರೀಮಿಯಂ (ದುಬಾರಿ) ಬ್ರಾಂಡ್‌ಗಳ ದರವನ್ನು ಇಳಿಸಲಾಗಿದೆ. ಇದು ಸರ್ಕಾರಕ್ಕೆ ಬಡವರ ಮೇಲಿರುವ ಕಾಳಜಿಯನ್ನು ತೋರಿಸುತ್ತದೆ ಎಂದು ವ್ಯಂಗ್ಯವಾಡಿದ್ದಾರೆ.

**ಸರ್ವ ವ್ಯಾಪಿ ಬೆಲೆ ಏರಿಕೆ:** ಹಾಲು, ವಿದ್ಯುತ್, ಬಸ್ ಪ್ರಯಾಣ ದರ, ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ರಾಜ್ಯ ಸರ್ಕಾರದ ತೆರಿಗೆ, ಸ್ಟ್ಯಾಂಪ್ ಡ್ಯೂಟಿ ಸೇರಿದಂತೆ ಎಲ್ಲಾ ಅಗತ್ಯ ಸೇವೆ ಹಾಗೂ ವಸ್ತುಗಳ ದರವನ್ನು ಸರ್ಕಾರ ಮನಬಂದಂತೆ ಏರಿಸಿದೆ. ಹಾಲಿನ ದರ ಏರಿಕೆಯನ್ನು 'ರೈತರ ಹಿತಕ್ಕಾಗಿ' ಎಂದು ಸ ' ಕ ಾ ರ ' ಸಮರ್ಥಿಸಿಕೊಳ್ಳುತ್ತಿದೆಯಾದರೂ, ಹಿಂದಿನ ಸರ್ಕಾರಗಳ ಅವಧಿಯಲ್ಲಿ ಜನರಿಗೆ ಇಷ್ಟೊಂದು ತೊಂದರೆ ಕೊಟ್ಟಿರಲಿಲ್ಲ ಎಂಬುದನ್ನು ಜನರು ನೆನಪಿಸಿಕೊಳ್ಳುತ್ತಿದ್ದಾರೆ ಎಂದಿದ್ದಾರೆ.

**ಸರ್ಕಾರದ ದ್ವಿಮುಖ ನೀತಿ:** ಅಂತರಾಷ್ಟ್ರೀಯ ಯುದ್ಧ ಪರಿಸ್ಥಿತಿ ಮತ್ತು ಜಾಗತಿಕ ಮಾರುಕಟ್ಟೆಯ ಏರಿಳಿತಗಳಿಂದಾಗಿ ದೇಶದಲ್ಲಿ ಕೆಲವು ವಸ್ತುಗಳ ಬೆಲೆ ಏರಿಕೆಯಾಗುವುದು ಸಹಜ ಮತ್ತು ಅನಿವಾರ್ಯ. ಆದರೆ ರಾಜ್ಯ ಸರ್ಕಾರವು ತನ್ನ ಆಡಳಿತ ವೈಫಲ್ಯವನ್ನು ಮುಚ್ಚಿಕೊಳ್ಳಲು ಕೇಂದ್ರ ಸರ್ಕಾರವನ್ನು ದೂಷಿಸುತ್ತಾ, ಮತ್ತೊಂದೆಡೆ ರಾಜ್ಯದಲ್ಲಿ ತನ್ನದೇ ತೆರಿಗೆ ಮತ್ತು ಸುಂಕಗಳನ್ನು ಹೆಚ್ಚಿಸಿ ಜನರ ಮೇಲೆ ಆರ್ಥಿಕ ಹೊರೆ ಹೇರುತ್ತಿದೆ.

ರಾಜ್ಯ ಸರ್ಕಾರವು ತಕ್ಷಣವೇ ತನ್ನ ಜನವಿರೋಧಿ ಬೆಲೆ ಏರಿಕೆ ನಿರ್ಧಾರಗಳನ್ನು ಹಿಂಪಡೆಯಬೇಕು ಮತ್ತು ರಾಜ್ಯದ ಜನತೆಯ ಕ್ಷಮೆಯಾಚಿಸಬೇಕು ಎಂದು ಮ್ಯಾಗೇರಿ ಅವರು ಪ್ರಕಟಣೆಯ ಮೂಲಕ ಬಲವಾಗಿ ಒತ್ತಾಯಿಸಿದ್ದಾರೆ.

"ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಜನರಿಗೆ ಆಮಿಷವೊಡ್ಡಿ ಅಧಿಕಾರಕ್ಕೆ ಬಂದು, ಈಗ ತೆರಿಗೆ ಮತ್ತು ದರ ಏರಿಕೆಯ ಮೂಲಕ ಜನರಿಂದಲೇ ಅದನ್ನು ವಸೂಲಿ ಮಾಡುತ್ತಿರುವುದು ಜನತೆಗೆ ಮಾಡಿದ ಮಹಾ ದ್ರೋಹವಾಗಿದೆ. ದಿನದ 18 ಗಂಟೆಗಳ ಕಾಲ ದೇಶಸೇವೆಯಲ್ಲಿ ತೊಡಗಿರುವ ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ 'ಅದಾನಿ–ಅಂಬಾನಿ ಪರ' ಎಂಬ ಸುಳ್ಳು ಆರೋಪಗಳನ್ನು ಮಾಡುವುದು ಕೇವಲ ರಾಜಕೀಯ ದುರುದ್ದೇಶದಿಂದ ಕೂಡಿದೆ."

**– ರಾಜಶೇಖರ್ ಮ್ಯಾಗೇರಿ, ಭಾಜಪಾ ಮುಖಂಡರು.**

# ಫಲಾನುಭವಿಗೆ ವಾಹನ ಹಸ್ತಾಂತರ



ನವಲಗುಂದ: ಸರ್ಕಾರದ ಸೌಲಭ್ಯಗಳು ನಿಜವಾದ ಅರ್ಹರಿಗೆ ತಲುಪಿ ಅವರ ಬದುಕಿನಲ್ಲಿ ಹೊಸ ಭವಿಷ್ಯ ನಿರ್ಮಾಣವಾಗಲಿ ಎಂದು ಶಾಸಕ ಎನ್ ಎಚ್ ಕೋನರಡ್ಡಿ ಹೇಳಿದರು

ಅವರು ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ 2025–26ನೇ ಸಾಲಿನ ಉದ್ಯಮಶೀಲತಾ ಯೋಜನ 'ಯಡಿ ಖರೀದಿಸಲಾದ ವಾಹನವನ್ನು ಫಲಾನುಭವಿಗೆ ಹಸ್ತಾಂತರಿಸಿ ಮಾತನಾಡಿದರು.

ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಮತ್ತು ಯುವಕರಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸಲು ಸರ್ಕಾರ ಜಾರಿಗೆ ತರುತ್ತಿರುವ ಯೋಜನೆಗಳು ಅನೇಕ ಕುಟುಂಬಗಳ ಬದುಕಿಗೆ ಹೊಸ ಆಶಾಕಿರಣವಾಗುತ್ತಿವೆ. ಉದ್ಯೋಗ ಕೇಳುವವರಿಗಿಂತ ಉದ್ಯೋಗ ಸೃಷ್ಟಿಸುವ ಯುವಕರು ಹೆಚ್ಚಾಗಬೇಕು ಎಂಬ ಆಶಯದೊಂದಿಗೆ ಇಂತಹ ಯೋಜನೆಗಳು ಸಮಾಜದ ಆರ್ಥಿಕ ಸಬಲೀಕರಣಕ್ಕೆ ಬಲ ತುಂಬುತ್ತಿವೆ ಎಂದರು.

ಬಂಗಾರೇಶ ಹಿರೇಮಠ, ಪ್ರಕಾಶ ಶಿಗ್ಲಿ, ಜೀವನ ಪವಾರ, ಅರುಣಕುಮಾರ ಮಜ್ಜಗಿ, ಮೋದಿನ ಶಿರೂರು, ಶಿವು ನಾಯ್ಕ, ನವೀನ ಹೊಸಗೌಡ್ರ, ಕರಿಯಪ್ಪ ಹರ್ಲಿ ಇತರರು ಇದ್ದರು.

# ಇತಿಹಾಸ ಬಲ್ಲವರು ಇತಿಹಾಸ ಸೃಷ್ಟಿಸುತ್ತಾರೆ



ಚನ್ನಮ್ಮನ ಕಿತ್ತೂರು: ಯಾರು ಇತಿಹಾಸ ಬಲ್ಲರೋ ಅವರು ಹೊಸ ಇತಿಹಾಸ ಸೃಷ್ಟಿಸುತ್ತಾರೆ. ಆ ಇತಿಹಾಸವನ್ನು ಜೀವಂತವಾಗಿ ಇಟ್ಟುಕೊಳ್ಳುವ ಕೆಲಸ ವಸ್ತು ಸಂಗ್ರಹಾಲಯಗಳು (ಮ್ಯೂಜಿಯಂಗಳು) ಮಾಡುತ್ತವೆ. ಎಂದು ಶಾಸಕ ಬಾಬಾಸಾಹೇಬ ಪಾಟೀಲ ಹೇಳಿದರು.

ಕಸಾಪ ಮತ್ತು ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಕಿತ್ತೂರರಾಣಿ ಚನ್ನಮ್ಮನ ಸ್ಮಾರಕ ಸರ್ಕಾರಿ ವಸ್ತು ಸಂಗ್ರಹಾಲಯ ಸಹಯೋಗದೊಂದಿಗೆ ಕೋಟೆ ಆವರಣದಲ್ಲಿ ಏರ್ಪಡಿಸಿದ್ದ ಅಂತರರಾಷ್ಟ್ರೀಯ ವಸ್ತು ಸಂಗ್ರಹಲಯ ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿಗೆ ನೀರುಣಿಸಿ ಮಾತನಾಡಿದರು. ಕೋಟೆಗೆ ಪ್ರವಾಸಿಗರು ವಿಕ್ಷೀಸಲು ಬಂದಾಗ ಚನ್ನಮ್ಮನ ಇತಿಹಾಸ ಹಾಗೂ ಇಲ್ಲಿಯ ವಸ್ತು ಸಂಗ್ರಹಾಲಯ ಕುರಿತು ರಾಜ್ಯ-ದೇಶಕ್ಕೆ ಪರಿಚಯಿಸುವ ಕೆಲಸ ಕೆಲವೇ ದಿನಗಳಲ್ಲಿ ಆಗುತ್ತದೆ. ಇದರ ಜೊತೆ ಕೋಟೆಯ ಹಳೇ ಗೋಡೆ ಮತ್ತು ಹಳೆ ಅರಮನೆ ನೆಲ ಹಾಸಿಗೆ ಜೀರ್ಣೋದ್ದಾರ ಮಾಡುವ ಕೆಲಸ ಪ್ರಾರಂಭವಾಗಿದೆ. ಅದಕ್ಕೆ ನಿಮ್ಮ ಸಹಕಾರ ಅಗತ್ಯ. ಇದರ ನೆಪದಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಪ್ರಥಮ ಸ್ಥಾನ ಗಳಿಸಿದ ವಿದ್ಯಾರ್ಥಿಗಳನ್ನು ಸತ್ಕರಿಸುವುದು ಶ್ಲಾಘನೀಯ. ಇದು ನಮಗೂ, ಶಿಕ್ಷಕರಿಗೂ, ಜಿಲ್ಲೆಗೂ, ತಾಲೂಕಾಡಳಿತಕ್ಕೂ ಹೆಸರು ತರುವಂತ ಕೆಲಸ ಎಂದರು.

ಬೆಳಗಾವಿ ಸಂಗೋಳ್ಳಿ ರಾಯಣ್ಣ ಪ್ರಥಮ ದರ್ಜೆ ಮಹಾವಿದ್ಯಾಲಯದ ಉಪನ್ಯಾಕ ಡಾ. ಸದಾಶಿವ ಮುಗಳಿ ಉಪನ್ಯಾಸ ನೀಡಿದರು.

ರಾಜಗುರು ಸಂಸ್ಥಾನ ಕಲ್ಮಠ ಶ್ರೀ ಮಡಿವಾಳ ರಾಜಯೋಗಿಂದ್ರ ಸ್ವಾಮಿಜೀ ಆರ್ಶೀವಚನ ನೀಡಿ ಮಾತನಾಡಿ ಕಿತ್ತೂರು ವಸ್ತು ಸಂಗ್ರಹಾಲಯಕ್ಕೆ 50 ವರ್ಷ ಗತಿಸಿದ್ದು ಇದು ಅಂದಿನ ಪ್ರಧಾನಿ ಇಂದಿರಾ ಗಾಂಧಿ ಕಾಲದಲ್ಲಿ ಉದ್ಘಾಟನೆಯಾಗಿತ್ತು. ಸರ್ಕಾರಗಳು 50 ವರ್ಷದ ಸಂಭ್ರಮಾಚರಣೆ ಮಾಡಬೇಕು ಅಂದಾಗ ಮಾತ್ರ ಈ ವಸ್ತು ಸಂಗ್ರಹಾಲಯಕ್ಕೆ ಹೆಚ್ಚಿನ ಮೆರಗು ಬರುತ್ತದೆ. ಈ ಭಾಗದ ಜನತೆ ಒತ್ತಾಸೆಯಾಗಿದೆ ಎಂದರು.

ಸಭೆ ಅಧ್ಯಕ್ಷತೆ ಕಸಾಪ ಅಧ್ಯಕ್ಷ ಡಾ. ಎಸ್.ಬಿ.ದಳವಾಯಿ ವಹಿಸಿಕೊಂಡು ಅಂತರ್ರಾಷ್ಟ್ರೀಯ ವಸ್ತು ಸಂಗ್ರಹಾಲಯ ಕುರಿತು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ತಹಶೀಲ್ದಾರ ಕಲ್ಲನಗೌಡ ಪಾಟೀಲ ಮತ್ತು ಸಿಪಿಐ ಶಿವಾನಂದ ಗುಡಗನಟ್ಟಿ ಮಾತನಾಡಿದರು. ಕ್ಯೂರೇಟರ್ ರಾಘವೇಂದ್ರ ಸ್ವಾಗತಿಸಿದರು.

2026ನೇ ಸಾಲಿನ ಎಸ್‌ಎಸ್‌ಎಲ್‌ಸಿಯಲ್ಲಿ ಪ್ರಥಮ ಮತ್ತು ದ್ವಿತೀಯ 125ಕ್ಕೆ 125 ಮತ್ತು 100ಕ್ಕೆ 100 ಅಂಕ ಪಡೆದು ಪಾಸಾದ ವಿದ್ಯಾರ್ಥಿಗಳಿಗೆ ಕನ್ನಡ ಪುಸ್ತಕ ಹಾಗೂ ಅಭಿನಂದನಾ ಪತ್ರ ನೀಡಿ.. ಜೊತೆಯಲ್ಲಿ ಅಥಿತಿಗಳನ್ನು ಸತ್ಕರಿಸಲಾಯಿತು.

ಸಭೆಯಲ್ಲಿ ಕ್ಷೇತ್ರ ಸಮನ್ವಯ ಅಧಿಕಾರಿ ಗಾಯತ್ರಿ ಅಜ್ಜನ್ನವರ, ತಾಪಂ ಇಓ ನಿಂಗಪ್ಪ ಮಸಳಿ, ಶಿಕ್ಷಕ ಮಂಜುನಾಥ ಕಳಸಣ್ಣವರ ನಿರೂಪಿಸಿದರು, ಸರ್ಕಾರಿ ಪದವಿ ಪೂರ್ವ ಕಾಲೇಜ ಪ್ರಾಚಾರ್ಯ ಶ್ರೀ ಹೊಸಮನಿ, ಮಹೇಶ ಹೊಂಗಲ, ಶಿಕ್ಷಕ ವಿವೇಕ ಕುರಗುದ, ಬಿದರಿ ಸರ್, ಮಕ್ಕಳು, ಪೋಷಕರು, ಸಾರ್ವನಿಕರಿದ್ದರು.

# ಹೋರಾಟಕ್ಕೆ ಬೆಂಬಲ



ಧಾರವಾಡ: ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆಯ ಆಡಳಿತಮಂಡಳಿ ಅದರ ಅಂಗ ಸಂಸ್ಥೆಗಳ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಧಾರವಾಡ ಪ್ರತ್ಯೇಕ ಪಾಲಿಕೆ ಹೋರಾಟ ವೇದಿಕೆಗೆ ಬೆಂಬಲವನ್ನು ವ್ಯಕ್ತಪಡಿಸಿ ಸಂಸ್ಥೆಯ ಟೌನಹಾಲಿನಿಂದ ಮೆರವಣಿಗೆಯೊಂದಿಗೆವಿದ್ಯಾವರ್ಧಕ ಸಂಘದ ಎದುರುಗಡೆ ಇರುವ ನಿರಂತರ ಉಪವಾಸ ನಿರಶನ ಸ್ಥಳಕ್ಕೆ ಆಗಮಿಸಿ ಹೋರಾಟದ ಅಧ್ಯಕ್ಷರಿಗೆ ಮನವಿಯನ್ನು ಅರ್ಪಿಸಲಾಯಿತು.

ಸಂಸ್ಥೆಯ ಕಾರ್ಯಾಧ್ಯಕ್ಷ ರಾಜಶೇಖರ ಬೆಳ್ಳಕ್ಕಿ ಮಾತನಾಡಿ ಪ್ರತ್ಯೇಕಪಾಲಿಕೆ ಮಾಡುವದರಿಂದ ಅಭಿವೃದ್ಧಿ ಕೆಲಸಗಳನ್ನು ಬೇಗಬೇಗ ಕೈಕೊಳ್ಳಬಹುದು ಎಂದರು.

ಮಹಾನಗರ ಪಾಲಿಕೆ ನೀಡುವ ದಾಖಲಾತಿಗಳಲ್ಲಿ ಯಾವುದಾದರು ತಿದ್ದುಪಡಿಗಳು ಇದ್ದರೆ ಅದನ್ನು ಸರಿಪಡಿಸಲು ಹುಬ್ಬಳ್ಳಿಗೆ ಒಡಾಡಬೇಕಾಗುತ್ತದೆ ಇದಕ್ಕೆ ಸಾಕಷ್ಟು ಸಮಯವನ್ನು ವ್ಯಯಿಸಬೇಕು ಎಂದರು. ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆಯು ನಾಡು, ಕನ್ನಡನುಡಿ, ಕರ್ನಾಟಕದ ಅಭಿವೃದ್ಧಿಗೆ ಸಂಬಂಧಿಸಿದ ಯಾವುದೇ ಹೋರಾಟಗಳಿದ್ದರೆ ಅದಕ್ಕೆ ಸಂಸ್ಥೆಯು ತನು, ಮನ, ಧನದಿಂದಪಾಲ್ಗೊಳ್ಳುತ್ತದೆ. ಆದಷ್ಟು ಬೇಗನೆ ಪ್ರತ್ಯೇಕ ಪಾಲಿಕೆ ಆಗಿ ಧಾರವಾಡವು ದೇಶಕ್ಕೆ ಮಾದರಿ ನಗರವಾಗಿ ಹೊರಹೊಮ್ಮಲಿ ಎಂದು ಆಶಿಸಿದರು.

ಇದೇ ಸಂದರ್ಭದಲ್ಲಿ ಧಾರವಾಡ ಹೈಕೊರ್ಟ ಪೀಠದ ಅಧ್ಯಕ್ಷರಾದ ಬಿ.ಡಿ.ಹಿರೇಮಠ ಮಾತನಾಡಿದರು.

ಹೋರಾಟದಲ್ಲಿ ಆಡಳಿತ ಮಂಡಳಿಯ ಜಂಟಿ ಕಾರ್ಯದರ್ಶಿಗಳಾದ ಎಸ್.ಎಂ.ಅಗಡಿ, ಆಡಳಿತ ಮಂಡಳಿಯ ಸದಸ್ಯರಾದ ಬಿ.ಎಸ್.ತಾಳಿಕೋಟಿ, ಎಂ.ಆರ್.ಇಂಡಿ, ಎ.ಎಸ್.ಹಿರೇಮಠ, ಕಚೇರಿ ಅಧೀಕ್ಷಕರಾದ ಶಿವಲಿಂಗ ನೀಲಗುಂದ, ಪ್ರಾಚಾರ್ಯರಾದ ಎಸ್.ಎಂ.ಬಮ್ಮನಗೌಡರ, ಶ್ರೀಮತಿ ಸವಿತಾಪಾಟೀಲ, ಶ್ರೀಮತಿ ಭುವನೇಶ್ವರಿ ದಂಡಿನ, ಡಿ.ಬಿ.ಹೊಂಬಳ, ಅಭಿಷೇಕಯಮನೂರ, ಅಭಿಷೇಕ ಜಹಗೀರದಾರ, ಟಿಪ್ಪುರಾಜ, ಮಹಾಂತೇಶ ಮೂಲ್ಕಿಪಾಟೀಲ, ನಾಗರಾಜ ಗೊಂದಿ, ಕಿರಣ ಬಣಕಾರ, ಎಸ್.ಎಂ.ಹೂಗಾರ, ಶ್ರೀಮತಿ. ಸಾವಿತ್ರಿ ಪಾಟೀಲ, ಶ್ರೀಮತಿ ಸ್ನೇಹಾ ವಾಲಗಳ್ಳಿ, ಶ್ರೀಮತಿ. ಪ್ರಭಾವತಿ ಗದಗಕರ, ಎಲ್.ಎಸ್.ತಳ್ಳಿ, ಮಹಾಂತೇಶ ಕ್ವಾಟಿ, ಸೋಮಶೇಖರ ಕರಡಿಗುಡ್ಡ, ರಾಘವೇಂದ್ರ ಗುಡೆಣ್ಣವರ, ಮೃತ್ಯುಂಜಯ ಅಮರಗೋಳ ಮತ್ತು ಅಪಾರ ಸಂಖ್ಯೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಭರದಿಂದ ಸಾಗಿರುವ ನಾಲಾ ಹೂಳೆತ್ತುವ ಕಾರ್ಯ

ಬೆಳಗಾವಿ: ಮಳೆಗಾಲದಲ್ಲಿ ನಾಲಾಗಳು ಚರಂಡಿಗಳು ತುಂಬಿ ರಸ್ತೆ ಮೇಲೆ ನೀರು ಹರಿಯುವುದು ಸೇರಿದಂತೆ ಮುಂತಾದ ಸಮಸ್ಯೆಗಳ ಪರಿಹಾರಕ್ಕಾಗಿ ಬೆಳಗಾವಿ ಮಹಾನಗರ ಪಾಲಿಕೆಯಿಂದ ನಾಲಾ ಹೂಳೆತ್ತುವ ಹಾಗೂ ಸ್ವಚ್ಛಗೊಳಿಸುವ ಕಾರ್ಯ ಭರದಿಂದ ಸಾಗಿದೆ.

ಮುಂಜಾಗೃತಾಕ್ರಮಕ್ಕೆ ಪಾಲಿಕೆ ಮುಂದಾಗಿದೆ. ಹಲವಾರು ಬಡಾವಣೆಗಳ ಸಾರ್ವಜನಿಕರಿಂದ ದೂರುಗಳು ಸಹ ಬಂದಿವೆ. ವಿವಿಧ ವಾರ್ಡ್‌ಗಳ ನಗರ ಸೇವಕರೂ ಸಹ ಮಳೆಗಾಲದಿಂದಾಗುವ ಅನಾನುಕೂಲತೆಗಳನ್ನು ಮುಂಚಿತವಾಗಿ ಸರಿಪಡಿಸಬೇಕೆಂಬ ಸಲಹೆಯನ್ನು ಸಹ ನೀಡಿದ್ದರು. ಈ ಹಿನ್ನಲೆಯಲ್ಲಿ ಸ್ವಚ್ಛತೆಯ ಕಡೆಗೆ ಗಮನಹರಿಸಿರುವ ಪಾಲಿಕೆಯು ಶೀಘ್ರದಲ್ಲೇ ಮಳೆಗಾಲ ಆರಂಭವಾಗುತ್ತಿರುವುದರಿಂದ ಮಹಾನಗರದ ವಿವಿಧ ಭಾಗಗಳಲ್ಲಿರುವ ನಾಲಾಗಳ ಹೂಳೆತ್ತುವ ಕಾರ್ಯಗಳನ್ನು ಕೈಗೆತ್ತಿಕೊಂಡಿದೆ.ಹಾಗೂ ಚರಂಡಿಗಳನ್ನು ಸ್ವಚ್ಛಗೊಳಿಸಿ ಕಸ ವಿಲೇವಾರಿ ಮಾಡುವ ಕಾರ್ಯ, ಗಾಳಿ ಮಳೆಯಿಂದ ಬೀಳುವ ಹಂತದಲ್ಲಿರುವ ಹಾಗೂ ಚರಂಡಿ ನೀರು ಹರಿಯಲು ಅಡ್ಡಲಾಗಿರುವ ಹಾಗೂ ವಿದ್ಯುತ್ ತಂತಿಗಳ ಮೇಲೆ ಬಿದ್ದು ಅಪಾಯ ತಂದೊಡ್ಡಲಿರುವ ಗಿಡ ಮರಗಳನ್ನು ತೆಗೆದುಹಾಕುವ ಕಾರ್ಯ ಸಹ ಭರದಿಂದ ಸಾಗಿದೆ.

ಖುದ್ದು ಪಾಲಿಕೆ ಆಯುಕ್ತರಾದ ಕಾರ್ತಿಕ್ ಎಂ ಅವರೇ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಅದೇ ಸಂದರ್ಭದಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಸಹ ಸ್ವೀಕರಿಸಿದ್ದಾರೆ. ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗೆ ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸಬೇಕೆಂದು ಸೂಚಿಸಿದ್ದಾರೆ. ವಿಭಾಗದ ಅಭಿಯಂತರ ಅಂಕಿತ ಸೇರಿದಂತೆ ಇತರ ಅಧಿಕಾರಿಗಳು, ವಾರ್ಡನ ನಗರ ಸೇವಕರು ಹಾಗೂ ಸಿಬ್ಬಂದಿ ಆಯುಕ್ತರಿಗೆ



ಸಾಥ್ ನೀಡಿದ್ದಾರೆ.

# ಸಕಾಲಕ್ಕೆ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಿ: ಮನಗೂಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸಿಇಒ ಭೇಟಿ



ವಿಜಯಪುರ: ಪ್ರತಿ ರೋಗಿಗೂ ಸಮರ್ಪಕ ಮತ್ತು ಗುಣಮಟ್ಟದ ಚಿಕಿತ್ಸೆಯನ್ನು ಸಕಾಲಕ್ಕೆ ನೀಡಬೇಕು. ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರು ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗೆ ಸೂಚಿಸಿದರು.

ಮನಗೂಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸೋಮವಾರ ದಿಢೀರ್ ಭೇಟಿ ನೀಡಿ, ಕೇಂದ್ರದ ಕಾರ್ಯನಿರ್ವಹಣೆ ಹಾಗೂ ಸೇವೆಗಳ ಗುಣಮಟ್ಟವನ್ನು ಸಮಗ್ರವಾಗಿ ಪರಿಶೀಲಿಸಿದ ಬಳಿಕ ಅವರು ಈ ಸೂಚನೆ ನೀಡಿದರು.

ಔಷಧ ಲಭ್ಯತೆ ಖಚಿತಪಡಿಸಿಕೊಳ್ಳಬೇಕು. ಅವಶ್ಯಕ ಔಷಧಗಳು ಸದಾ ಲಭ್ಯವಾಗುವಂತೆ ನೋಡಿಕೊಳ್ಳಬೇಕು. ರೋಗಿಗಳಿಗೆ ಹೊರಗೆ ಔಷಧ ಖರೀದಿಸಲು ತೊಂದರೆ ಆಗಬಾರದು ಎಂದರು.

ರಕ್ತ ಪರೀಕ್ಷೆ ಸೇರಿದಂತೆ ಎಲ್ಲಾ ತಪಾಸಣೆಗಳನ್ನು ಶೀಘ್ರ ಮತ್ತು ನಿಖರವಾಗಿ ಪೂರ್ಣಗೊಳಿಸುವಂತೆ ಕ್ರಮ ವಹಿಸಬೇಕು ಎಂದೂ ಸೂಚಿಸಿದ ಅವರು, ಆರೋಗ್ಯ ಕೇಂದ್ರದ ಒಳ ಹಾಗೂ ಹೊರ ಭಾಗಗಳಲ್ಲಿ ಸ್ವಚ್ಛತೆ ಕಾಪಾಡಿ, ರೋಗಿಗಳಿಗೆ ಆರೋಗ್ಯಕರ ವಾತಾವರಣ ಒದಗಿಸಬೇಕು ಎಂದರು.

ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಆರೋಗ್ಯ ಕೇಂದ್ರದಲ್ಲಿ ಹಾಜರಿದ್ದು, ತಮ್ಮ ಕರ್ತವ್ಯಗಳನ್ನು ಸಮರ್ಥವಾಗಿ ಜವಾಬ್ದಾರಿಯಿಂದ ನಿರ್ವಹಿಸಬೇಕು ಎಂದ ಅವರು, ಆರೋಗ್ಯ ಕೇಂದ್ರದಲ್ಲಿ ರೋಗಿಗಳಿಗೆ ಗೌರವಪೂರ್ಣ ಮತ್ತು ಸ್ನೇಹಪೂರ್ಣ ಸೇವೆ ಒದಗಿಸಬೇಕು ಎಂದು ಸಿಇಒ ಸೂಚಿಸಿದರು.

ಒಳರೋಗಿ ಮತ್ತು ಹೊರರೋಗಿಗಳ ದಾಖಲೆಗಳನ್ನು ಸರಿಯಾಗಿ ನಿರ್ವಹಿಸಿ, ದಿನನಿತ್ಯದ ಮಾಹಿತಿಯನ್ನು ನವೀಕರಿಸಬೇಕು. ಕುಡಿಯುವ ನೀರು, ವಿದ್ಯುತ್, ಶೌಚಾಲಯ ಸೇರಿದಂತೆ ಎಲ್ಲಾ ಮೂಲಭೂತ ಸೌಲಭ್ಯಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು ಎಂದರು.

ಪರಿಶೀಲನೆ ವೇಳೆ ಆರೋಗ್ಯ ಕೇಂದ್ರದ ಸ್ವಚ್ಛತೆ ಹಾಗೂ ವ್ಯವಸ್ಥೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಸಿಇಒ ರಿಷಿ ಆನಂದ ಅವರು, ಇದೇ ಗುಣಮಟ್ಟದ ಸೇವೆಯನ್ನು ನಿರಂತರವಾಗಿ ಕಾಪಾಡಿಕೊಳ್ಳಬೇಕು ಎಂದು ಸೂಚಿಸಿದರು.

ಬಳಿಕ ಜಿಪಂ ಸಿಇಒ ಅವರು, ಚಿಕಿತ್ಸೆಗೆ ಆಗಮಿಸಿದ್ದ ಫಲಾನುಭವಿಗಳೊಂದಿಗೆ ನೇರ ಸಂವಾದ ನಡೆಸಿದರು. ಚಿಕಿತ್ಸೆಯ ಸಮಯಪಾಲನೆ, ಔಷಧ ಲಭ್ಯತೆ, ತಪಾಸಣೆಗಳ ವೇಗ ಮತ್ತು ಮೂಲಭೂತ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ವೈದ್ಯಾಧಿಕಾರಿಗಳಾದ ಡಾ. ದೀಪಕ ಹಾಗೂ ಇತರರು ಉಪಸ್ಥಿತರಿದ್ದರು.

# ಸ್ಫೂರ್ತಿ ಕೋಚಿಂಗ್ ರಚನಾತ್ಮಕ ಪಠ್ಯಕ್ರಮ ಅನುಸರಿಸುತ್ತಿದೆ: ಶ್ವೇತಾ




ತಾಳಿಕೋಟೆ: ಪ್ರತೀ ವರ್ಷ ಸ್ಫೂರ್ತಿ ಕೋಚಿಂಗ್ ಸೆಂಟರ್ ವತಿಯಿಂದ ವಿದ್ಯಾರ್ಥಿಗಳಿಗಾಗಿ ಬೇಸಿಗೆ ಶಿಬಿರವನ್ನು ಪ್ರತೀ ವರ್ಷ ಏರ್ಪಡಿಸುತ್ತಾ ಸಾಗಿ ಬಂದಿದ್ದು ಈ ಶಿಭಿರದಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳಿಗೆ ಪರೀಕ್ಷೆಗಳಿಗೆ ಅಗತ್ಯವಿರುವಂತ ವಿಷಯಗಳು ಅಲ್ಲದೇ ನಮ್ಮ ಸಂಸ್ಕೃತಿಯನ್ನು ಅನುಸರಿಸುತ್ತಾ ಸಾಗುವಂತಹ ವಿಷಯಗಳನ್ನು ಸಹ ಮನವರಿಕೆ ಮಾಡಲಾಗುತ್ತದೆ ಎಂದು ಸ್ಫೂರ್ತಿ ಕೋಚಿಂಗ್ ಸೆಂಟರ್ ಸಂಚಾಲಕಿ ಕುಮಾರಿ ಶ್ವೇತಾ ಯರಗಲ್ಲ ಅವರು ಹೇಳಿದರು.

ಸೋಮವಾರರಂದು ಸ್ಫೂರ್ತಿ ಕೋಚಿಂಗ್ ಸೆಂಟರ್ ವತಿಯಿಂದ ತರಬೇತಿ ಪಡೆದ ವಿದ್ಯಾರ್ಥಿಗಳ ಕುರಿತು ಏರ್ಪಡಿಸಲಾದ ತಾಯಂದಿರ ದಿನಾಚರಣೆ ಮಾಹಿತಿ ನೀಡಲು ನಡೆಸಿದ ಅಮ್ಮನಿಗೊಂದು ನಮನ ಎಂಬ ತಾಯಂದಿರ ಪಾದಪೂಜಾ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದ ಅವರು ವಿದ್ಯಾರ್ಥಿಗಳಿಗಾಗಿ ನೀಡುತ್ತಾ ಸಾಗಿಬಂದಿರುವ ತರಬೇತಿಯು ದೈನಂದಿನ ತರಬೇತಿ ಒಳಗೊಳಪಡಿಸುತ್ತಾ ಸಾಗಿಬಂದಿರುವುದು ಇಲ್ಲಿ ವಿವಿಧ ವಿಷಯಗಳ ಕುರಿತು ನುರಿತ ಉಪನ್ಯಾಸಕರಿಂದ ಉಪನ್ಯಾಸ ನೀಡುತ್ತಾ ಸಾಗಿಬಂದಿದ್ದಲ್ಲದೇ ವಿದ್ಯಾರ್ಥಿಗಳಲ್ಲಿ ಶಿಸ್ತು ಸ್ಥರತೆ ಎಂಬುದು ಎದ್ದು ಕಾಣಲು ಕಾರಣವಾಗಿದೆ ಎಂದ ಅವರು ಈ ಕಾರಣದಿಂದಲೇ ಹೆಚ್ಚು ಅಂಕ ಪಡೆದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸುವಂತಹ ಸಂಸ್ಥೆಯು ನಡೆಸುತ್ತಾ ಸಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಹಿರಿಯ ಪತ್ರಕರ್ತ ಜಿ.ಟಿ. ಘೋರ್ಪಡೆ ಅವರು ಮಾತನಾಡಿ ಸ್ಫೂರ್ತಿ ಕೋಚಿಂಗ್ ವತಿಯಿಂದ ಬೇಸಿಗೆ ಶಿಬಿರ ಏರ್ಪಡಿಸುತ್ತಾ ವಿದ್ಯಾರ್ಥಿಗಳಿಗೆ ವಿದ್ಯಾದಾನ ಮಾಡಲಾಗುತ್ತಿದೆ ಈ ಸಂಸ್ಥೆ ಕಳೆದ 5 ವರ್ಷಗಳಿಂದ ತನ್ನ ಸೇವಾ ಕಾರ್ಯದಲ್ಲಿ ಮುನ್ನಡೆಯುತ್ತಾ ತನ್ನದೇ ಆದಂತಹ ಘನತೆ ಗೌರವದಿಂದ ನಡೆದ ಈ ಸಂಸ್ಥೆಯಲ್ಲಿ ಕೇವಲ ಶಿಕ್ಷಣ ಒಂದೇ ಅಲ್ಲ ಆಪತ್ಕಾಲದಲ್ಲಿ ಸ್ವಯಂ ರಕ್ಷಣೆ ಮಾಡಿಕೊಳ್ಳುವ ಕುರಿತು ನುರಿತ ಕರಾಟೆ ಶಿಕ್ಷಕರಿಂದ ಮಾರ್ಗದರ್ಶನ ಹಾಗೂ ಭರತನಾಟ್ಯ, ಸಂಗೀತ ವಿದ್ಯೆಗಳನ್ನು ನೀಡುತ್ತಾ ಸಾಗಿರುವದು ಸಂತೋಷ ದಾಯಕವಾದ ಮಾತಾಗಿದೆ ಎಂದ ಘೋರ್ಪಡೆ ಅವರು ಈ ಸಂಸ್ಥೆಯ ಮುಖ್ಯಸ್ಥರಾದ ಮದರಿ ದಂಪತಿಗಳು ಹಾಗೂ ಕುಮಾರಿ ಶ್ವೇತಾ ಯರಗಲ್ಲ ಅವರ ಸೇವಾ ಕಾರ್ಯಗಳ ಕುರಿತು ಮುಕ್ತಕಂಠದಿಂದ ಹೊಗಳಿದರು.

ಇನ್ನೋರ್ವ ಅತಿಥಿ ಡಾ. ಸುವರ್ಣಾ ಸಾಲೋಟಗಿ ಅವರು ಮಾತನಾಡಿ ಮಾತಾಪಿತ ಎಂಬ ಸ್ಥಾನಮಾನ ಮೊದಲನೇ ಗುರುವಿನ ಸ್ಥಾನ ಪಡೆದಿದೆ ಈ ಕಾರಣದಿಂದಲೇ ಮನೆಯೇ ಮೊದಲ ಪಾಠಶಾಲೆ ಜನನಿಯಿಂದ ಪಾಠ ಕಲಿತ ಜನರು ಧನ್ಯರು ಎಂಬ ಗಾದೆಯಂತೆ ಇಂದು ಸ್ಫೂರ್ತಿ ಸಂಸ್ಥೆ ಏರ್ಪಡಿಸಿದ್ದ ತಾಯಂದಿರ ಪಾದಪೂಜೆ ಕಾರ್ಯಕ್ರಮ ಸ್ಫೂರ್ತಿ ನೀಡುವಂತಿದ್ದು ಒಳ್ಳೆ ಮಾರ್ಗದರ್ಶನ ನೀಡುವಂತ ಈ ಕಾರ್ಯಕ್ರವಾಗಿದೆ ಎಂದು ಹೇಳಿದ ಅವರು ಪ್ರತೀ ವರ್ಷ ನಡೆಸುತ್ತಿರುವ ಈ ಬೇಸಿಗೆ ಶಿಬಿರವು ಯಥಾಸ್ಥಿತಿ ಮುಂದುವರೆಯಲಿ ಎಂದು ಶುಭ ಕೋರಿದರು.

ಇದೇ ಸಮಯದಲ್ಲಿ ಸಂಸ್ಥೆಯ ಅಧ್ಯಕ್ಷ ಸಿದ್ದಾರೂಢ ಮದರಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರಲ್ಲದೇ ಕರಾಟೆ ಶಿಕ್ಷಕ ಮಶಾಕ್ ಮುಲ್ಲಾ ಶಿಕ್ಷಕ ಗುರು ಮಡಿಕೇಶ್ವರ ಮಾತನಾಡಿದರು.

ದಿವ್ಯ ಸಾನಿಧ್ಯ ವಹಿಸಿದ ಖ್ಯಾತ ಪ್ರವಚನಕಾರ ಜೋತಿಷ್ಯತಜ್ಞ ವಸಂತ ಜೋಷಿ ಅವರು ಮಾತನಾಡಿ ತಾಯಂದಿರ ವಿಚಾರಗಳನ್ನು ಮಕ್ಕಳಿಗೆ ತಿಳಿಸಿ ಅರ್ಥೈಯಿಸಿದರಲ್ಲದೇ ಮಾತಾಪಿತರ ಪಾದಪೂಜೆ ಮಹತ್ವವನ್ನು ವಿದ್ಯಾಥಿರ್ಗಳಿಗೆ ತಿಳಿಸಿ ಅರ್ಥೈಯಿಸಿದರು.

ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಎಲ್ಲ ತಾಯಂದಿರರು ಪಾದಪೂಜೆ ನೆರವೇರಿಸಿಕೊಂಡು ಮಕ್ಕಳಿಗೆ ಆಶೀರ್ವದಿಸಿದರು.

ತರಬೇತಿ ಪಡೆದ ವಿದ್ಯಾರ್ಥಿಗಳು ತಮ್ಮ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಕುಮಾರಿ ಅಂಬಿಕಾ ಹಾಗೂ ಸಂಗಡಿಗರು ಭರತನಾಟ್ಯ ಪ್ರದರ್ಶಿಸಿದರು.

ಎಸ್‌ಎಸ್‌ಎಲ್‌ಸಿ ಯಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ಅತಿಥಿ ಮಹೋದಯರಿಗೆ ಸಂಸ್ಥೆಯ ಶಿಕ್ಷಕ ವೃಂದದವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಭರತನಾಟ್ಯ ಶಿಕ್ಷಕ ವಿನೋದ ಚಿಕ್ಕಮಠ ಹಾಗೂ ಮಹಾಂತೇಶ ಬಸರಕೋಡ, ಶಿವರಾಜ ತಂಗಡಗಿ, ಸಂಗೀತ ಶಿಕ್ಷಕಿ ದಿಲ್‌ಶಾ, ಸಂಸ್ಥೆಯ ಸಂಚಾಲಕಿ ಶ್ರಿಮತಿ ಶಾಂತಾಬಾಯಿ ಮದರಿ ಇದ್ದರು.

ಶಿಕ್ಷಕಿ ಸೌಮ್ಯಾ, ಪ್ರಾಣೇಶ್ವರಿ ಪ್ರಾರ್ಥಿಸಿದರು. ಐಶ್ವರ್ಯ ಹಾಗೂ ಅಂಕಿತಾ ಹೂಗಾರ ನಿರೂಪಿಸಿದರು. ಆಕಾಶ ಹಜೇರಿ ವಂದಿಸಿದರು.

# ಸಾರ್ವಜನಿಕರ ಗಮನಕ್ಕೆ

ಗದಗ : ಜಿಲ್ಲೆಯಲ್ಲಿ ಜುಲೈ -2025 ರಿಂದ ಏಪ್ರಿಲ್ -2026 ರವರೆಗೆ ಕಾರ್ಯನಿರ್ವಹಿಸುತ್ತಿರುವ ವಿವಿಧ ಬಗೆಯ ಅಬಕಾರಿ ಸನ್ನದುಗಳು ಅಬಕಾರಿ ನಿಯಮ ಉಲ್ಲಂಘನೆಗಳ ಬಗ್ಗೆ ( ಸನ್ನದು ಷರತ್ತು ಉಲ್ಲಂಘನೆಗಳ ಕುರಿತು) ( ಬಿಎಲ್‌ಸಿ) ಒಟ್ಟು 268 ಪ್ರಕರಣಗಳನ್ನು ದಾಖಲಿಸಿಕೊಂಡು , ರು, 40,51,000 ದಂಡವನ್ನು ವಸೂಲಿಸಲಾಗಿರುತ್ತದೆ. ಈ ಅವಧಿಯಲ್ಲಿ ಒಟ್ಟು 04 ಸನ್ನದುಗಳನ್ನು ಅಮಾನತ್ತುಪಡಿಸಲಾಗಿರುತ್ತದೆ. ಅಲ್ಲದೇ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಮದ್ಯ ಸೇವನೆಯ ( 15 ( ಎ) ) ಕುರಿತು ಒಟ್ಟು 636 ಪ್ರಕರಣಗಳನ್ನು ದಾಖಲಿಸಿಕೊಂಡು ರೂ, 11,17,000 ದಂಡವನ್ನು ವಸೂಲಿಸಲಾಗಿರುತ್ತದೆ.

ಅಕ್ರಮ ಮಾರಾಟದ ಕುರಿತು ಒಟ್ಟು 28 ಘೋರ ಪ್ರಕರಣಗಳು, ಕಳ್ಳಭಟ್ಟಿ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಒಟ್ಟು 23 ಮತ್ತು ಎನ್‌ಡಿಪಿಎಸ್ ಒಟ್ಟು 09 ಪ್ರಕರಣಗಳನ್ನು ದಾಖಲಿಸಿಕೊಂಡು ನಿಯಮಗಳನ್ವಯ ಕ್ರಮ ವಹಿಸಲಾಗಿರುತ್ತದೆ.

ಪ್ರಸುತ ಮೇ -2026 ಮಾಹೆಯಲ್ಲಿ 15 ( ಎ ) [illegible] 34, ಬಿ ಎಲ್ ಸಿ-13 ಹಾಘೂ ಘೋರ-6 & ಎನ್ ಡಿ ಪಿ ಎಸ್ -1 ಪ್ರಕರಣಗಳನ್ನು ದಾಖಲಿಸಿಕೊಂಡು ನಿಯಮಗಳನ್ವಯ ಕ್ರಮ ವಹಿಸಲಾಗಿರುತ್ತದೆ. ಅಬಕಾರಿ ಅಕ್ರಮಗಳನ್ನು ತಡೆಗಟ್ಟುವ ಕ್ರಮ ಜಾರಿಯಲ್ಲಿದೆ ಎಂದು ಗದಗ ಜಿಲ್ಲೆ ಅಬಕಾರಿ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001